# ಕರಾವಳಿ ತರಂಗಿಣಿ

ಕಡಲ ಕಿನಾರೆಯಿಂದ ಕೆಂಪು ಕೋಟೆಯವರೆಗೆ..

ಕನ್ನಡ ವಾರಪತ್ರಿಕೆ

**ಸುಭಾಷಿತ:**

ಇತರರಿಗೆ ಬುದ್ಧಿ ಹೇಳುವ ಮುನ್ನ
ನಿನ್ನನ್ನು ನೀನು ತಿದ್ದಿಕೊಳ್ಳುವುದು ಮುಖ್ಯ
ಗಾಜಿನ ಮನೆಗೆ ಕಲ್ಲು ಹೊಡೆಯುವ ಮುನ್ನ
ನೀನು ಗಾಜಿನಿಂದ ಹೊರಬರುವುದು ಮುಖ್ಯ
ಆಕಾಶ ನೋಡಿ ಉಗಿಯುವ ಮುನ್ನ
ನಿನ್ನ ಮುಖವನ್ನು ತಪ್ಪಿಸಲೆತ್ನಿಸುವುದು ಮುಖ್ಯ
ಇನ್ನೊಬ್ಬರನ್ನು ಜೀವಿಸಲು ಬಿಡಲೆನ್ನುವ ಮುನ್ನ
ನೀನು ಬದುಕಲು ಸಾಧ್ಯವೇ ಎನ್ನುವುದು ಮುಖ್ಯ
ಎಲ್ಲವೂ ನನ್ನಿಂದಲೇ ಎನ್ನುವ ಮುನ್ನ
ಮೇಲೊಬ್ಬ ಇದ್ದಾನೆ ಎನ್ನುವುದು ಬಹಳ ಮುಖ್ಯ



REGD NO: 1327299/KARKAN/2018/26532 www.karavalitharangini.com KARAVALI THARANGINI KANNADA Weekly Mangaluru ದಿನಾಂಕ: 05-09-2025 to 11-09-2025 ಬೆಲೆ: 7-00 ಸಂಪುಟ–5 ಸಂಚಿಕೆ–11 ಪುಟಗಳು–6

ಕ್ಷಣ ಕ್ಷಣದ ಸುದ್ದಿಗಳಿಗಾಗಿ
ಕರಾವಳಿ ತರಂಗಿಣಿ
ಪತ್ರಿಕಾ ಬಳಗದಿಂದ
ಅಂತರ್ಜಾಲ ಮಾಧ್ಯಮ
www.karavalitharangini.com
ಕರಾವಳಿ ತರಂಗಿಣಿ
ಮಂಗಳೂರು






ಇತ್ತೀಚಿನ ದಿನಗಳಲ್ಲಿ ಸೊಪ್ಪು ತರಕಾರಿಗಳನ್ನು ಬೆಳೆಯುವಾಗ ವಿಷಪೂರಿತ ಕೀಟನಾಶಕಗಳನ್ನು ಬಳಸಲಾಗುತ್ತಿದೆ ಎನ್ನುವ ಆರೋಪಗಳು ಹೆಚ್ಚಾಗಿ ಬರುತ್ತಿದ್ದು, ಅದರೊಂದಿಗೆ ಬೆಳೆಸಿದ ತರಕಾರಿಗಳು ಮಾರುಕಟ್ಟೆಗೆ ಬಂದ ನಂತರ ಬೇಗ ಹಾಳಾಗದಿರಲು ಮತ್ತೆ ಅದಕ್ಕೆ ರಾಸಾಯನಿಕ ಸಿಂಪಡಿಸುತ್ತಾರೆ ಎನ್ನುವ ಆರೋಪ ಕೂಡ ಇದೆ. ಹೀಗಿರುವಾಗ ತರಕಾರಿ ಉಪಯೋಗಿಸುವ ಮೊದಲು ಉಪ್ಪು ಮತ್ತು ಅರಶಿನ ಮಿಶ್ರಿತ ನೀರಿನಲ್ಲಿ ತರಕಾರಿಯನ್ನು ನೆನಸಿಟ್ಟು ನಂತರ ಉಪಯೋಗಿಸುವುದು ಉತ್ತಮ ಎನ್ನುವುದು ವೈದ್ಯರ ಸಲಹೆ.

## ಧರ್ಮಯಾತ್ರೆ ಅಲ್ಲ, ರಾಜಕೀಯ ಯಾತ್ರೆ –ಸಿದ್ದರಾಮಯ್ಯ



**ಮೈಸೂರು:** ಧರ್ಮಸ್ಥಳಕ್ಕೆ ಬಿಜೆಪಿ ಕೈಗೊಂಡಿರುವುದು ಧರ್ಮ ಯಾತ್ರೆಯಲ್ಲ ರಾಜಕೀಯ ಯಾತ್ರೆಯೆಂದು ಮುಖ್ಯಮಂತ್ರಿ ಸಿದ್ದರಾಮಯ್ಯ ಅಭಿಪ್ರಾಯಪಟ್ಟರು. ಅವರು ಇಂದು ಮೈಸೂರಿನಲ್ಲಿ ಮಾಧ್ಯಮದವರೊಂದಿಗೆ ಮಾತನಾಡಿ, ಧರ್ಮಸ್ಥಳ ಪ್ರಕರಣಕ್ಕೆ ಸಂಬಂಧಿಸಿದಂತೆ ಎಸ್‌ಐಟಿ ತನಿಖೆ ನಡೆಯುತ್ತಿದೆ. ಬಿಜೆಪಿ ಈಗ ಎನ್‌ಐಎ ತನಿಖೆಗೆ ಒತ್ತಾಯಿಸುತ್ತಿದ್ದಾರೆ. ಹಾಗಾದರೆ ನಮ್ಮ ಪೊಲೀಸರ ಮೇಲೆ ಬಿಜೆಪಿಯವರಿಗೆ ನಂಬಿಕೆ ಇಲ್ಲವೇ ಎಂದು ಮುಖ್ಯಮಂತ್ರಿಗಳು ಪ್ರಶ್ನಿಸಿದರು. ಎಸ್‌ಐಟಿ ರಚನೆಯಾದ ಪ್ರಾರಂಭದಲ್ಲಿ ಎನ್‌ಐಎ ರಚಿಸಿ ತನಿಖೆ ಮಾಡಿ ಎನ್ನಲಿಲ್ಲ. ನಂತರ ದೇಹಗಳು ಸಿಗದೇ ಹೋದಾಗ **3ನೇ ಪುಟಕ್ಕೆ**

## ಕೊರಗರಿಗೆ ಘನತೆಯ ಬದುಕು ಒದಗಿಸಿ –ಮುಖಂಡರ ಒತ್ತಾಯ



**ಮಂಗಳೂರು:** ದ.ಕ. ಜಿಲ್ಲೆಯ ಮೂಲ ನಿವಾಸಿಗಳಾದ ಕೊರಗರ ಸಮಸ್ಯೆಗೆ ಪರಿಹಾರ ಸಿಗಬೇಕಾದರೆ ಅತಿ ಮುಖ್ಯ ಬೇಡಿಕೆಯಾದ 'ಭೂಮಿ ಹಕ್ಕಿನ' ಬೇಡಿಕೆ ಇತ್ಯರ್ಥವಾಗಬೇಕು. ಭೂಮಿ ಇಲ್ಲದೆ ಯಾವುದೇ ಯೋಜನೆ ಮಾಡಲಾಗದು. ಭೂಮಿ ಒದಗಿಸಿ ಕೊರಗರಿಗೆ ಘನತೆಯ ಬದುಕು ಒದಗಿಸಿ ಎಂದು ಅಧಿಕಾರಿಗಳನ್ನು ಕೊರಗ ಮುಖಂಡರು ಒತ್ತಾಯಿಸಿದ್ದಾರೆ. ಸಮಾಜ ಕಲ್ಯಾಣ ಇಲಾಖೆ ಹಾಗೂ ಮಂಗಳೂರು ತಾಲೂಕು ಪಂಚಾಯತ್ ವತಿಯಿಂದ ಬುಧವಾರ ತಹಶೀಲ್ದಾರ್ ಅಧ್ಯಕ್ಷತೆಯಲ್ಲಿ ಕೊರಗರ ಅಭಿವೃದ್ಧಿ ಸಭೆಯನ್ನು ಆಯೋಜಿಸಲಾಗಿತ್ತು. ಸಭೆಯ **3ನೇ ಪುಟಕ್ಕೆ**

## ಹಿಂದುತ್ವದ ಧ್ವನಿ ಅಡಗಿಸಲು ಷಡ್ಯಂತ್ರ –ಜೋಶಿ



**ಧರ್ಮಸ್ಥಳ:** ಹಿಂದೆ ಶಬರಿಮಲೆ, ಆಮೇಲೆ ಶನಿಸಿಂಗಾಪುರ, ಈಗ ಧರ್ಮಸ್ಥಳ. ದ.ಕ. ಜಿಲ್ಲೆಯಲ್ಲಿ ಹಿಂದುತ್ವದ ಅಲೆಯನ್ನು ಹಿಮ್ಮೆಟ್ಟಿಸಲಾಗಿಲ್ಲ. ಹಾಗಾಗಿ ಧರ್ಮಸ್ಥಳ ಶ್ರದ್ಧಾ ಕೇಂದ್ರದ ಮೇಲೆ ದಾಳಿ ಹಿಂದುತ್ವ ಧ್ವನಿ ಅಡಗಿಸಲು ರಾಜ್ಯ ಕಾಂಗ್ರೆಸ್ ಸರಕಾರದ ಷಡ್ಯಂತ್ರ ಎಂದು ಕೇಂದ್ರ ಸಚಿವ ಪ್ರಹ್ಲಾದ್ ಜೋಶಿ ಹೇಳಿದ್ದಾರೆ. ಅವರು "ಶ್ರೀಕ್ಷೇತ್ರ ಧರ್ಮಸ್ಥಳ ಚಲೋ" ಬೃಹತ್ ಸಮಾವೇಶ ಕಾರ್ಯಕ್ರಮದಲ್ಲಿ ಭಾಗವಹಿಸಿ ಮಾತನಾಡಿ, ಬಹುಸಂಖ್ಯಾತರ ವಿರುದ್ಧ ಕಾಂಗ್ರೆಸ್ ನಿರಂತರ ಷಡ್ಯಂತ್ರ **3ನೇ ಪುಟಕ್ಕೆ**







## ಕೊರಗರಿಗೆ ಘನತೆಯ ಬದುಕು ಒದಗಿಸಿ–ಮುಖಂಡರ ಒತ್ತಾಯ

ಒಂದನೇ ಪುಟದಿಂದ......

ಆರಂಭದಲ್ಲಿ, ಸಮಸ್ಯೆಗಳನ್ನು ಹೇಳಿಕೊಳ್ಳುವಂತೆ ಕೊರಗ ಮುಖಂಡರಿಗೆ ಅಧಿಕಾರಿಗಳು ತಿಳಿಸಿದಾಗ ಕೊರಗರ ಬೇಡಿಕೆಗಳ ಕುರಿತಂತೆ ಇಲಾಖೆಯಿಂದ ನಡೆಸಲಾದ ಪ್ರಗತಿಯ ಬಗ್ಗೆ ಪರಿಶೀಲನೆ ನಡೆಸುವಂತೆ ಮುಖಂಡರು ಆಗ್ರಹಿಸಿದರು. ಇದು ಪ್ರಗತಿ ಪರಿಶೀಲನಾ ಸಭೆಯಲ್ಲ. ಕೊರಗರ ಅಭಿವೃದ್ಧಿಗೆ ಪೂರಕವಾಗಿ ಸಮಸ್ಯೆಗಳನ್ನು ತಿಳಿಯಲು ಕರೆಯಲಾದ ಸಭೆ'ಎಂದು ತಾಪಂ ಇಒ ಮಹೇಶ್ ಹೊಳ್ಳ ಅವರು ಕೊರಗ ಮುಖಂಡರನ್ನು ಸಮಾಧಾನ ಪಡಿಸಲೆತ್ನಿಸಿದರು. ನಮ್ಮ ಬೇಡಿಕೆಗಳನ್ನು ಈಗಾಗಲೇ ನೀಡಿದ್ದೇವೆ. ಅದು ಏನಾಗಿದೆ ಎಂಬ ಬಗ್ಗೆ ನಮಗೆ ಉತ್ತರ ನೀಡಿ. ಭೂಮಿಗಾಗಿ ನಾವು ಹಲವು ವರ್ಷಗಳಿಂದ ಹೋರಾಟ ಮಾಡುತ್ತಿದ್ದೇವೆ. ಅದರ ಬಗ್ಗೆ ಪರಿಶೀಲನೆ ಆಗದಿದ್ದರೆ ಸಭೆಯಾಕೆ? 1993ರಲ್ಲಿ ಕೊರಗರು ತಮ್ಮ ಭೂಮಿಯ ಹಕ್ಕಿಗಾಗಿ ರ್‍ಯಾಲಿ ಮಾಡಿದ ಬಳಿಕ ಡಾ. ಮಹ್ಮಮದ್ ಪೀರ್ ವರದಿ ಸಲ್ಲಿಕೆಯಾಗಿದೆ. ಆದರೆ ಅದನ್ನು ಅನುಷ್ಠಾನ ಮಾಡಲಾಗಿಲ್ಲ. ನಮ್ಮ ಅಭಿವೃದ್ಧಿಗಾಗಿ ಖರ್ಚು ಮಾಡಲಾಗುವ ಅನುದಾನ ನಮಗೆ ಸಿಗದಿದ್ದರೆ ನಮ್ಮ ಜನಾಂಗ ಮೇಲೆ ಬರುವುದಾರೂ ಹೇಗೆ? ನನಗೆ 60 ವರ್ಷ ಪ್ರಾಯ. ನನ್ನ ಅಮ್ಮ ನನ್ನನ್ನು ಕಂಕುಳಲ್ಲಿ ಹೊತ್ತು ಮಲ ಹೊರುತ್ತಾ ನನಗೆ ಆಹಾರ ತಿನ್ನಿಸುತ್ತಿದ್ದ ಆ ಅಸ್ಪೃಶ್ಯತೆಯ ನೋವು ಇನ್ನೂ ಮಾಸಿಲ್ಲ. ಸರಕಾರದ ಹಲವು ಯೋಜನೆಗಳ ಹೊರತಾಗಿಯೂ ನಾವು ಇನ್ನೂ ಅಸ್ಪೃಶ್ಯರಲ್ಲಿ ಅಸ್ಪೃಶ್ಯರಾಗಿ ಉಳಿದಿದ್ದೇವೆ. ಮೇಲ್ನೋಟಕ್ಕೆ ಅವೆಲ್ಲಾ ಅಗೋಚರವಾಗಿವೆ ಎಂದು ದ.ಕ. ಜಿಲ್ಲಾ ಕೊರಗ ಸಂಘಟನೆಯ ಸದಸ್ಯ ಸಂಜೀವ ತೀವ್ರ ಅಸಮಾಧಾನ ವ್ಯಕ್ತಪಡಿಸಿದರು.

## ಹಿಂದುತ್ವದ ಧ್ವನಿ ಅಡಗಿಸಲು ಷಡ್ಯಂತ್ರ– ಜೋಶಿ

ಒಂದನೇ ಪುಟದಿಂದ......

ಮಾಡುತ್ತಾ ಬಂದಿದೆ. ಆದ್ದರಿಂದ ಈ ಬುರುಡೆ ಸರ್ಕಾರಕ್ಕೆ ಧಿಕ್ಕಾರ ಎಂದು ಹೇಳಿದರು. ಷಡ್ಯಂತ್ರ ಮಾಡಿದವರನ್ನು ನಾವು ಒಂದು ಕೈ ನೋಡ್ತೇವೆ. ಆದರೆ ಹೊಡೆಯೋದು ಬಡಿಯೋದು ಮಾಡಲ್ಲ. ಅವರನ್ನು ಸಮಾಜ ತಿರಸ್ಕಾರ ಮಾಡಬೇಕು. ಕಾಂಗ್ರೆಸ್ ಸದಾ ಕಾಲ ಹಿಂದೂಗಳನ್ನು ತಿರಸ್ಕಾರ ಮಾಡುತ್ತಾ ಬಂದಿದೆ. ಈ ಗುಣ ಅವರಿಗೆ ರಕ್ತದಲ್ಲೇ ಬಂದಿದೆ ಎಂದರು. ಎಸ್‌ಐಟಿಯನ್ನು ನಾವು ಕೂಡ ಸ್ವಾಗತಿಸಿದೆವು. ಮುಸುಕುಧಾರಿ ವ್ಯಕ್ತಿ ಕಾಂಗ್ರೆಸ್‌ನ ಸ್ನೇಹಿತ. ಅವನಿಗೆ ಒದಿಬೇಕು ಅನಿಸಿಲ್ವಾ? ಅವನು ಬುರುಡೆ ಎಲ್ಲಿಂದ ತಂದ ಎಂದು ಸರಕಾರ ಏಕೆ ಕೇಳಿಲ್ಲ?. ಧರ್ಮಸ್ಥಳದ ಎಲ್ಲಾ ಕಡೆ ಅಗೆದು ಹಾಕಿದ್ದರು. ಇನ್ನೊಂದು ಸಮಾಜದ ಧಾರ್ಮಿಕ ಸ್ಥಳದಲ್ಲಿ ಹೀಗೆ ಮಾಡಲು ಸರಕಾರಕ್ಕೆ ಸಾಧ್ಯವೇ? ದರ್ಗಾದ ಬಳಿ ಹೀಗೆ ಅಗೆದು ಹಾಕಲು ಸಾಧ್ಯವೇ? ಹಿಂದೂಗಳೆಂದ್ರೆ ಕೇಳೋರಿಲ್ವಾ? ಜನರು ಛೀಥೂ ಎಂದು ಉಗಿದಾಗ ಅಗೆಯುವುದನ್ನು ನಿಲ್ಲಿಸಿದರು. ಯಾರು ಏನೇ ಪ್ರಯತ್ನಿಸಲಿ ಖಾವಂದರೇ ಮೋದಿ ಸರ್ಕಾರ ತಮ್ಮೊಂದಿಗಿದೆ ಎಂದರು.

## ಧರ್ಮಯಾತ್ರೆ ಅಲ್ಲ, ರಾಜಕೀಯ ಯಾತ್ರೆ – ಸಿದ್ದರಾಮಯ್ಯ

ಒಂದನೇ ಪುಟದಿಂದ......

ಒತ್ತಾಯಿಸುತ್ತಿದ್ದಾರೆ. ಧರ್ಮಸ್ಥಳದ ಧರ್ಮಾಧಿಕಾರಿ ವೀರೇಂದ್ರ ಹೆಗ್ಗಡೆಯವರೇ ಸ್ವತಃ ಸತ್ಯ ಹೊರಬರಲಿ ಎಂದು ಎಸ್‌ಐಟಿ ರಚನೆಯನ್ನು ಸ್ವಾಗತಿಸಿದ್ದಾರೆ. ನಮ್ಮ ಮೇಲಿನ ಅನುಮಾನದ ತೂಗುಗತ್ತಿ ನಿವಾರಣೆಯಾಗಬೇಕೆಂದಿದ್ದಾರೆ. ಎಸ್‌ಐಟಿ ತನಿಖೆ ಸ್ವತಂತ್ರವಾಗಿ ಮಾಡುತ್ತಿದ್ದು ನಾವ್ಯಾರು ಅದರಲ್ಲಿ ಹಸ್ತಕ್ಷೇಪ ಮಾಡಿಲ್ಲ. ಸತ್ಯ ಹೊರಬರಬೇಕು. ಸೌಜನ್ಯ ಪ್ರಕರಣವನ್ನು ಸಿಬಿಐಗೆ ಹಸ್ತಾಂತರ ಮಾಡಬೇಕೆಂದು ಬಿಜೆಪಿ ಒತ್ತಾಯಿಸುತ್ತಿರುವ ಬಗ್ಗೆ ಮಾತನಾಡಿದ ಮುಖ್ಯಮಂತ್ರಿಗಳು ಸಿಬಿಐ ಕೇಂದ್ರ ಸರ್ಕಾರದ ಅಧೀನದಲ್ಲಿದ್ದು, ಅವರು ತನಿಖೆ ಮಾಡಿ ವರದಿ ಕೊಟ್ಟಿದ್ದಾರೆ. ಈಗ ಸರ್ವೋಚ್ಚ ನ್ಯಾಯಾಲಯಕ್ಕೆ ಹೋಗಬೇಕೆಂದು ಬಿಜೆಪಿ ಹೇಳುತ್ತಿದೆ. ಸೌಜನ್ಯ ಪ್ರಕರಣದಲ್ಲಿ ವೀರೇಂದ್ರ ಹೆಗ್ಗಡೆಯವರ ಮೇಲೆ ಆರೋಪವಿದೆ. ಹಾಗಾದರೆ ಬಿಜೆಪಿ ಯಾರ ಪರ ಇದ್ದಾರೆ ಎಂದು ಪ್ರಶ್ನಿಸಿದರು. ವೀರೇಂದ್ರ ಹೆಗಡೆಯವರ ಪರ ಎನ್ನುತ್ತಾರೆ ಮತ್ತೊಂದಡೆ ಸೌಜನ್ಯ ಪರ ಎನ್ನುತ್ತಾರೆ. ಈಗ ಬೇರೆ ಹೇಳುತ್ತಿದ್ದಾರೆ. ದಿನಕ್ಕೊಂದು ಹೇಳಿಕೆ ಕೊಡಬಾರದು. ಅಸತ್ಯದ ಮೇಲೆ ಚರ್ಚೆ ಮಾಡಿದರೆ ಹೀಗೆ ಆಗುವುದು ಎಂದರು.

## ಗ್ರಾಮ ಒನ್ ಕೇಂದ್ರಗಳಿಗೆ ಅರ್ಜಿ ಆಹ್ವಾನ

ಮಡಿಕೇರಿ : ಕೊಡಗು ಜಿಲ್ಲೆಯಲ್ಲಿ ಪ್ರಸ್ತುತ 11 ಗ್ರಾಮ ಪಂಚಾಯತ್‌ಗಳಲ್ಲಿ 'ಸಮಗ್ರ ನಾಗರಿಕ ಸೇವಾ ಕೇಂದ್ರ/ ಗ್ರಾಮ ಒನ್ ಕೇಂದ್ರಗಳಿಗೆ ಆಸಕ್ತ ಪ್ರಾಂಚೈಸಿಗಳಿಂದ ಇಡಿಸಿಎಸ್, ಬೆಂಗಳೂರಿನಿಂದ ಅರ್ಜಿ ಆಹ್ವಾನಿಸಲಾಗಿದೆ. ಹೆಚ್ಚಿನ ಮಾಹಿತಿಗೆ ಇ-ಮೇಲ್ ಐಡಿ : care@blsinternational.net ನ್ನು ಸಂಪರ್ಕಿಬಹುದು.

## ಅಂಗನವಾಡಿ ಕಾರ್ಯಕರ್ತೆ– ಸಹಾಯಕಿ ಹುದ್ದೆಗೆ ಅರ್ಜಿ ಆಹ್ವಾನ

ಮಂಗಳೂರು–ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ ಇಲಾಖೆಯ ಶಿಶು ಅಭಿವೃದ್ಧಿ ಯೋಜನೆ ಬೆಳ್ತಂಗಡಿ, ಬಂಟ್ವಾಳ, ಮಂಗಳೂರು ಗ್ರಾಮಾಂತರ, ಮಂಗಳೂರು ನಗರ, ಪುತ್ತೂರು, ಸುಳ್ಯ ಹಾಗೂ ವಿಟ್ಲ ವ್ಯಾಪ್ತಿಯಲ್ಲಿ ಬರುವ ಅಂಗನವಾಡಿ ಕೇಂದ್ರಗಳಲ್ಲಿ ಖಾಲಿ ಇರುವ ಒಟ್ಟು 56 ಅಂಗನವಾಡಿ ಕಾರ್ಯಕರ್ತೆ, 221 ಅಂಗನವಾಡಿ ಸಹಾಯಕಿಯರ ಗೌರವ ಸೇವೆಗಳ ಹುದ್ದೆಗೆ ಆನ್‌ಲೈನ್‌ನಲ್ಲಿ ಅರ್ಹ ಮಹಿಳಾ ಅಭ್ಯರ್ಥಿಗಳಿಂದ ಅರ್ಜಿ ಆಹ್ವಾನಿಸಲಾಗಿದೆ.

## ಪ.ಜಾತಿ, ಪ.ಪಂಗಡ–ಮೀನುಗಾರರಿಂದ ಅರ್ಜಿ ಆಹ್ವಾನ

ಮಂಗಳೂರು – ಮೀನುಗಾರಿಕೆ ಇಲಾಖೆಯಿಂದ 2025–26ನೇ ಸಾಲಿಗೆ ರಾಜ್ಯ ವಲಯ ವಿಶೇಷ ಘಟಕ ಯೋಜನೆ ಮತ್ತು ಗಿರಿಜನ ಉಪಯೋಜನೆಗಳಡಿ ನಾಲ್ಕು ಚಕ್ರ ವಾಹನ ಖರೀದಿಸಲು ಸಹಾಯಧನಕ್ಕಾಗಿ ಅರ್ಹ ಪರಿಶಿಷ್ಟ ಜಾತಿ ಮತ್ತು ಪರಿಶಿಷ್ಟ ಪಂಗಡ ಮೀನುಗಾರರಿಂದ ಅರ್ಜಿ ಆಹ್ವಾನಿಸಲಾಗಿದೆ. ಹೆಚ್ಚಿನ ಮಾಹಿತಿಗೆ ತಾಲೂಕು ಮಟ್ಟದ ಅಧಿಕಾರಿಗಳಾದ ಮೀನುಗಾರಿಕೆ ಸಹಾಯಕ ನಿರ್ದೇಶಕರು, ಮಂಗಳೂರು ಸಂಪರ್ಕಿಸುವಂತೆ ಮಂಗಳೂರು ಮೀನುಗಾರಿಕೆ ಉಪನಿರ್ದೇಶಕರು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

## ಅಲ್ಪಸಂಖ್ಯಾತರ ಸ್ಟಾರ್ಟ್‌ಅಪ್ ಯೋಜನೆಗೆ ಅರ್ಜಿ ಆಹ್ವಾನ

ಮಂಗಳೂರು – ಕರ್ನಾಟಕ ಅಲ್ಪಸಂಖ್ಯಾತರ ಅಭಿವೃದ್ಧಿ ನಿಗಮದ ವತಿಯಿಂದ ಯುವಕ/ ಯುವತಿಯರಿಗೆ ನವೋದ್ಯಮಗಳನ್ನು ಪ್ರಾರಂಭಿಸಲು ಉತ್ತೇಜನ ನೀಡುವ ಯೋಜನೆಯನ್ನು ವಿದ್ಯುನ್ಮಾನ, ಮಾಹಿತಿ ತಂತ್ರಜ್ಞಾನ ಮತ್ತು ಜೈವಿಕ ತಂತ್ರಜ್ಞಾನ ಇಲಾಖೆ ಸಹಯೋಗದೊಂದಿಗೆ ಜಾರಿಗೊಳಿಸಲಾಗಿರುತ್ತದೆ. ಈ ಯೋಜನೆಗೆ ವೆಬ್‌ಸೈಟ್ https://eitbt.karnataka.gov.in/en ಮೂಲಕ ಅರ್ಜಿ ಸಲ್ಲಿಸಬಹುದು. ಹೆಚ್ಚಿನ ಮಾಹಿತಿಗೆ ದೂರವಾಣಿ ಸಂಖ್ಯೆ: 080-2223100 ಅಥವಾ ಇ-ಮೇಲ್ elevate.ktech@ka.gov.in ಸಂಪರ್ಕಿಸಬಹುದು ಎಂದು ನಿಗಮದ ಜಿಲ್ಲಾ ವ್ಯವಸ್ಥಾಪಕರು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

## ಎಸ್‌ಸಿ/ಎಸ್‌ಟಿ ಮೀನು ಮಾರಾಟಗಾರರ ಆರ್ಥಿಕ ನೆರವಿಗೆ ಅರ್ಜಿ ಆಹ್ವಾನ

ಶಿವಮೊಗ್ಗ: 2025–26ನೇ ಸಾಲಿನಲ್ಲಿ ಮೀನುಗಾರಿಕೆ ಇಲಾಖೆಯ ರಾಜ್ಯವಲಯದಿಂದ ವಿಶೇಷ ಘಟಕ ಯೋಜನೆ ಮತ್ತು ಗಿರಿಜನ ಉಪಯೋಜನೆಯಡಿ ಪರಿಶಿಷ್ಟ ಜಾತಿ ಮತ್ತು ಪರಿಶಿಷ್ಟ ಪಂಗಡದ ಮೀನು ಮಾರಾಟಗಾರರಿಗೆ ಆರ್ಥಿಕ ನೆರವು ನೀಡಲು ಆನ್‌ಲೈನ್ ಅರ್ಜಿ ಆಹ್ವಾನಿಸಲಾಗಿದೆ. ಹೆಚ್ಚಿನ ಮಾಹಿತಿಗಾಗಿ ಮೀನುಗಾರಿಕೆ ಸಹಾಯಕ ನಿರ್ದೇಶಕ, ಶಿವಮೊಗ್ಗ– 9986040981, ಭದ್ರಾವತಿ– 9743370815, ಶಿಕಾರಿಪುರ–9686939028, ಸಾಗರ ಮತ್ತು ಹೊಸನಗರ–9538044365, ಸೊರಬ–9535386449, ತೀರ್ಥಹಳ್ಳಿ– 8655132438 ಈ ದೂರವಾಣಿ ಸಂಖ್ಯೆಯನ್ನು ಸಂಪರ್ಕಿಸುವುದು.

## ವಾಲ್ಮೀಕಿ ಪ್ರಶಸ್ತಿ ಪಡೆಯಲು ಅರ್ಜಿ ಆಹ್ವಾನ

ಶಿವಮೊಗ್ಗ: 2025–26ನೇ ಸಾಲಿಗೆ ಆಚರಿಸುವ ಶ್ರೀ ಮಹರ್ಷಿ ವಾಲ್ಮೀಕಿ ಜಯಂತಿ ಪ್ರಯುಕ್ತ ಪರಿಶಿಷ್ಟ ವರ್ಗದ ಏಳಿಗೆಗಾಗಿ ಶ್ರಮಿಸಿದ ವ್ಯಕ್ತಿಗಳಿಗೆ ಶ್ರೀ ಮಹರ್ಷಿ ವಾಲ್ಮೀಕಿ ಸ್ಮರಣಾರ್ಥ ಪ್ರಶಸ್ತಿ ನೀಡಿ ಗೌರವಿಸಲಾಗುತ್ತಿದ್ದು, ಅರ್ಹ ವ್ಯಕ್ತಿಗಳಿಂದ ಅರ್ಜಿ ಆಹ್ವಾನಿಸಿದೆ. ಆಸಕ್ತರು ನಿಗದಿತ ನಮೂನೆ ಅರ್ಜಿಯನ್ನು ಜಿಲ್ಲಾ ಪರಿಶಿಷ್ಟ ವರ್ಗಗಳ ಕಲ್ಯಾಣಾಧಿಕಾರಿಗಳ ಕಚೇರಿ, ಶ್ರೀ ಮಹರ್ಷಿ ವಾಲ್ಮೀಕಿ ಭವನ, ಕಂಟ್ರಿ ಕ್ಲಬ್ ರಸ್ತೆ, ವಿದ್ಯಾನಗರ, ಶಿವಮೊಗ್ಗ ಇಲ್ಲಿಂದ ಪಡೆದು, ಭರ್ತಿ ಮಾಡಿದ ಅರ್ಜಿಯನ್ನು ಸೆಪ್ಟೆಂಬರ್ 10 ರೊಳಗಾಗಿ ಸಲ್ಲಿಸುವಂತೆ ಜಿ.ಪ.ವ. ಕಲ್ಯಾಣಾಧಿಕಾರಿಗಳು ಪ್ರಕಟಣೆಯಲ್ಲಿ ತಿಳಿಸಿರುತ್ತಾರೆ.

## ಪ್ರಧಾನಮಂತ್ರಿ ಉದ್ಯೋಗ ಸೃಜನ ಅರ್ಜಿ ಆಹ್ವಾನ

ಮಡಿಕೇರಿ : 2025–26ನೇ ಸಾಲಿನ ಭಾರತ ಸರ್ಕಾರದ ಪ್ರಧಾನಮಂತ್ರಿ ಉದ್ಯೋಗ ಸೃಜನ (ಪಿಎಂಇಜಿಪಿ) ಕಾರ್ಯಕ್ರಮದ ಅಡಿಯಲ್ಲಿ ಉತ್ಪಾದನೆ/ಸೇವಾ ಘಟಕಗಳಿಗೆ ಸಾಲ ಸೌಲಭ್ಯ ಪಡೆಯಲು ಆನ್‌ಲೈನ್ ಮುಖಾಂತರ ಹೊಸದಾಗಿ ಸ್ವಂತ ಉದ್ಯೋಗ ಆರಂಭಿಸುವ ಎಲ್ಲಾ ವರ್ಗದ ನಿರುದ್ಯೋಗ ಯುವಕ, ಯುವತಿಯರಿಂದ ಆನ್‌ಲೈನ್‌ನಲ್ಲಿ ಅರ್ಜಿ ಆಹ್ವಾನಿಸಲಾಗಿದೆ. ಹೆಚ್ಚಿನ ಮಾಹಿತಿಗಾಗಿ 08272– 225946ನ್ನು ಸಂಪರ್ಕಿಸಬಹುದು ಎಂದು ಜಿಲ್ಲಾ ಅಭಿವೃದ್ಧಿ ಅಧಿಕಾರಿ ಅವರು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

## ಎಸ್‌ಸಿಡಿಸಿಸಿ ಬ್ಯಾಂಕ್‌ಗೆ ಸಾರ್ವಕಾಲಿಕ ಗರಿಷ್ಠ 110.41 ಕೋಟಿ ರೂ. ಲಾಭ




ಮಂಗಳೂರು: ಸಹಕಾರ ಕ್ಷೇತ್ರಕ್ಕೆ ಆದರ್ಶವಾಗಿರುವ ದಕ್ಷಿಣ ಕನ್ನಡ ಜಿಲ್ಲಾ ಕೇಂದ್ರ ಸಹಕಾರಿ ಬ್ಯಾಂಕ್ 2024–25ನೇ ಸಾಲಿನಲ್ಲಿ ಸಾರ್ವಕಾಲಿಕ ಗರಿಷ್ಠ 110.41 ಕೋಟಿ ರೂ. ಲಾಭ ಗಳಿಸಿ ತನ್ನ ಸದಸ್ಯ ಸಂಘಗಳಿಗೆ ಶೇ.10 ಡಿವಿಡೆಂಡ್ ನ್ನು ಬ್ಯಾಂಕ್‌ನ ಅಧ್ಯಕ್ಷ 'ಸಹಕಾರ ರತ್ನ' ಡಾ.ಎಂ.ಎನ್.ರಾಜೇಂದ್ರ ಘೋಷಿಸಿದರು. ಬ್ಯಾಂಕ್‌ನ ಸಭಾಭವನದಲ್ಲಿ ಶನಿವಾರ ನಡೆದ 111ನೇ ವಾರ್ಷಿಕ ಮಹಾಸಭೆಯ ಅಧ್ಯಕ್ಷತೆ ವಹಿಸಿ ಅವರು ಮಾತನಾಡಿದರು. ಬ್ಯಾಂಕ್ ವೈವಿಧ್ಯಮಯ ಯೋಜನೆ ಗಳನ್ನು ಕಾರ್ಯಗತಗೊಳಿಸಿ ಆಧುನಿಕ ಬ್ಯಾಂಕಿಂಗ್ ಸೇವೆಯಲ್ಲಿ ರಾಷ್ಟ್ರಕ್ಕೆ ಮಾದರಿಯಾಗಿದೆ. ಇದು ಸಮಸ್ತ ರೈತಾಪಿ ವರ್ಗದ ಹಾಗೂ ಗ್ರಾಹಕರ ಸೇವೆಯಲ್ಲಿ ಮುಂಚೂಣಿಯಲ್ಲಿದ್ದು, ಸಹಕಾರಿ ಬ್ಯಾಂಕಿಂಗ್ ರಂಗದಲ್ಲಿ ವಿನೂತನ ಸಾಧನೆಯೊಂದಿಗೆ ದೇಶದ ಅಗ್ರಮಾನ್ಯ ಜಿಲ್ಲಾ ಕೇಂದ್ರ ಸಹಕಾರಿ ಬ್ಯಾಂಕ್ ಆಗಿ ಜನಾನುರಾಗಿಯಾಗಿದೆ. ಸಹಕಾರ ತತ್ವದ ಮೂಲ ಆಶಯಕ್ಕೆ ಧಕ್ಕೆ ಬಾರದ ರೀತಿಯಲ್ಲಿ ಕಾರ್ಯನಿರ್ವಹಿಸುತ್ತಿರುವ ಎಸ್‌ಸಿಡಿಸಿಸಿ ಬ್ಯಾಂಕ್ ಸಾಧನೆಯ 111 ವರ್ಷಗಳನ್ನು ಯಶಸ್ವಿಯಾಗಿ ಪೂರೈಸಿ ಅಭಿವೃದ್ಧಿ ಪಥದಲ್ಲಿದೆ. ವರದಿ ವರ್ಷದಲ್ಲಿ ಬ್ಯಾಂಕ್ ಸಾಧಿಸಿದ ಯಶಸ್ಸು ಅಭೂತ ಪೂರ್ವವಾದದ್ದು, ಬ್ಯಾಂಕಿಂಗ್ ಕ್ಷೇತ್ರದಲ್ಲಿ ಸ್ಪರ್ಧೆ ಎದುರಿಸಿದರೂ ಬ್ಯಾಂಕ್ ವರದಿ ವರ್ಷದಲ್ಲಿ ಅತ್ಯುತ್ತಮ ಸಾಧನೆಗೈದಿದೆ ಎಂದರು.

## ಎಲ್ಲವನ್ನೂ ಮಂಜುನಾಥ ಸ್ವಾಮಿಗೆ ಬಿಟ್ಟಿದ್ದೇವೆ : ವೀರೇಂದ್ರ ಹೆಗ್ಗಡೆ




ಧರ್ಮಸ್ಥಳ : ಧರ್ಮಸ್ಥಳದ ಬೆಳವಣಿಗೆಯಿಂದ ಪುರುಷರಿಗಿಂತ ಮಹಿಳೆಯರೇ ಹೆಚ್ಚು ಕಣ್ಣೀರಿಟ್ಟಿದ್ದಾರೆ, ವೇದನೆ ಪಡುತ್ತಿದ್ದಾರೆ. ಕೆಲವು ಹೆಣ್ಣು ಮಕ್ಕಳು ಯಾವುದೇ ರೀತಿಯ ಹೋರಾಟ, ಪ್ರತಿಭಟನೆಗೂ ಸಿದ್ಧರಿದ್ದಾರೆ. ಆದರೆ, ಅಂತಹ ಹೋರಾಟದ ಅವಶ್ಯಕತೆ ಇಲ್ಲ. ಎಲ್ಲವನ್ನೂ ಮಂಜುನಾಥ ಸ್ವಾಮಿಗೆ ಬಿಟ್ಟಿದ್ದೇವೆ. ನಾನು ಯಾವತ್ತೂ ಸತ್ಯ ಬಿಟ್ಟು ಹೋಗಿಲ್ಲ, ಹೋಗುವುದೂ ಇಲ್ಲ. ಎಲ್ಲರೂ ಶಾಂತತೆಯನ್ನು ಕಾಪಾಡಬೇಕು ಹಾಗೂ ತಾಳ್ಮೆಯಿಂದ ಇರಬೇಕು ಎಂದು ಧರ್ಮಸ್ಥಳದ ಧರ್ಮಾಧಿಕಾರಿ ಡಾ. ಡಿ. ವೀರೇಂದ್ರ ಹೆಗ್ಗಡೆ ಶ್ರೀಕ್ಷೇತ್ರದ ಭಕ್ತಾಧಿಗಳಲ್ಲಿ ಮನವಿ ಮಾಡಿದ್ದಾರೆ. ಧರ್ಮಸ್ಥಳ ಅಪಪ್ರಚಾರ ಖಂಡಿಸಿ ನಡೆದ ಕಾರ್ಯಕ್ರಮದಲ್ಲಿ ಮಾತನಾಡಿದ ಅವರು, ಶ್ರೀ ಕ್ಷೇತ್ರಕ್ಕೆ ಇಂದು ಬಹಳ ವಿಶೇಷವಾದ ಕಳೆ ಬಂದಿದೆ. ಇಷ್ಟೊಂದು ಆಶಯಧಾರಿಗಳು, ಆಶೀರ್ವಚನ ನೀಡುತ್ತಿರುವುದು ತುಂಬಾನೆ ದೊಡ್ಡದು. ಕ್ಷೇತ್ರಕ್ಕೆ ಇಷ್ಟೊಂದು ಸಂಖ್ಯೆಯಲ್ಲಿ ಜನರು ಬಂದಿರುವುದು ಸಂತೋಷ ನೀಡಿದೆ ಎಂದಿದ್ದಾರೆ. ಎಸ್‌ಐಟಿ ತನಿಖೆ ನಡೆಯುತ್ತಿರುವ ಕಾರಣ ಹೆಚ್ಚು ಮಾತನಾಡಬಾರದು ಎಂದು ಆದೇಶ ಆಗಿದೆ. ಸತ್ಯಕ್ಕೆ ಎರಡು ಮುಖಗಳಿಲ್ಲ, ಒಂದೇ ಮುಖ ಇರುವುದು. ವ್ಯಕ್ತಿ ಯಾವುದೇ ಧರ್ಮವಾಗಲಿ, ಆ ಧರ್ಮಕ್ಕೆ ಶರಣಾಗಬೇಕು. ಇಲ್ಲವಾದಲ್ಲಿ ಅವರು ಅನುಯಾಯಿಗಳೇ ಅಲ್ಲ. ಮಂಜುನಾಥನ ಆಶೀರ್ವಾದ ಎಲ್ಲರ ಮೇಲೂ ಇರಲಿ. ನಾವು ಮಾಡುವ ಪ್ರಯತ್ನಗಳಿಗೆ ಸ್ವಾಮಿಯ ಅನುಗ್ರಹ ಇದ್ದೇ ಇರುತ್ತದೆ ಎಂದಿದ್ದಾರೆ.

## ಮಲ್ಪೆ ಕಡಲತೀರಕ್ಕೆ ತೇಲಿ ಬಂದ ಕಸದ ರಾಶಿ



ಉಡುಪಿ : ಮಳೆಗಾಲದಲ್ಲಿ ಸಮುದ್ರ ಅಲೆಗಳೊಂದಿಗೆ ಬಂದ ಕಸಕಡ್ಡಿಗಳು ಮಲ್ಪೆ ಕಡಲ ತೀರಕ್ಕೆ ಬಂದು ಬಿದ್ದಿದ್ದು, ತ್ಯಾಜ್ಯದ ದೊಡ್ಡ ರಾಶಿಗಳು ಇನ್ನೂ ತೆರವುಗೊಳಿಸದೆ ಉಳಿದಿದ್ದು, ಪ್ರವಾಸಿಗರು ಮತ್ತು ನಿವಾಸಿಗಳು ಕಸದ ರಾಶಿ ಕರಾವಳಿಯ ಸೌಂದರ್ಯವನ್ನು ಹಾಳು ಮಾಡುತ್ತಿದೆ ಎಂದು ಟೀಕಿಸುತ್ತಿದ್ದಾರೆ. ಪ್ಲಾಸ್ಟಿಕ್ ತ್ಯಾಜ್ಯ, ಬಾಟಲಿಗಳು, ಡೈಪರ್‌ಗಳು, ಪಾದರಕ್ಷೆಗಳು, ತ್ಯಜಿಸಿದ ಆಟಿಕೆಗಳು ಮತ್ತು ಆಹಾರ ಹೊದಿಕೆಗಳು ಕಡಲತೀರದ ಸುಮಾರು ಎರಡು ಕಿಲೋಮೀಟರ್‌ಗಳಷ್ಟು ಹರಡಿಕೊಂಡಿವೆ. ಕಳೆದ ವರ್ಷ ಕಡಲತೀರದ ನಿರ್ವಹಣೆಯ ಜವಾಬ್ದಾರಿಯನ್ನು ಕಡಲತೀರ ಅಭಿವೃದ್ಧಿ ಸಮಿತಿಯಿಂದ ಪ್ರವಾಸೋದ್ಯಮ ಇಲಾಖೆಗೆ ವರ್ಗಾಯಿಸಿದಾಗಿನಿಂದ, ಈ ಮಳೆಗಾಲದಲ್ಲಿ ಯಾವುದೇ ತೆರವು ಕಾರ್ಯವನ್ನು ಕೈಗೊಳ್ಳಲಾಗಿಲ್ಲ ಎಂದು ಸ್ಥಳೀಯರ ಆರೋಪ. ಇದಕ್ಕೂ ಮೊದಲು, ಮಳೆಗಾಲದಲ್ಲಿ ಕನಿಷ್ಠ ಎರಡು ಮೂರು ಬಾರಿ ತ್ಯಾಜ್ಯವನ್ನು ತೆರವುಗೊಳಿಸಲಾಗುತ್ತಿತ್ತು. ಕಸದ ರಾಶಿಗಳು ದುರ್ವಾಸನೆ ಬೀರುತ್ತಿದ್ದು, ಸತ್ತ ಮೀನುಗಳು ಉಬ್ಬರವಿಳಿತದಿಂದ ಬರುವ ಕಸದೊಂದಿಗೆ ಬೆರೆಯುತ್ತಿವೆ ಎಂಬ ವರದಿಗಳಿವೆ.

## ಧರ್ಮಸ್ಥಳ ವಿರುದ್ಧ ಮಾನಹಾನಿಕರ ವಿಷಯ : ತೆಗೆದುಹಾಕಲು ಆದೇಶ



ಮಂಗಳೂರು : ನೂರಾರು ಶವಗಳ ಹೂತಿರುವ ಆರೋಪ ಪ್ರಕರಣಕ್ಕೆ ಸಂಬಂಧಿಸಿದಂತೆ ಧರ್ಮಸ್ಥಳ ದೇವಸ್ಥಾನ ಅದರ ಮುಖ್ಯಸ್ಥರು ಮತ್ತು ಅವರ ಕುಟುಂಬವನ್ನು ಗುರಿಯಾಗಿಸಿಕೊಂಡು ಬರೆದಿರುವ ಮಾನಹಾನಿಕರ ವಿಷಯಗಳನ್ನು ತಕ್ಷಣ ತೆಗೆದುಹಾಕುವಂತೆ ಇಲ್ಲಿನ ನ್ಯಾಯಾಲಯ ಶುಕ್ರವಾರ ಆದೇಶಿಸಿದೆ. 17 ನೇ ಹೆಚ್ಚುವರಿ ಸಿಟಿ ಸಿವಿಲ್ ಮತ್ತು ಸೆಷನ್ಸ್ ನ್ಯಾಯಾಲಯದ ತೀರ್ಪು ಸಂಬಂಧಿತ ಅರ್ಜಿಯಲ್ಲಿ ಸುಪ್ರೀಂಕೋರ್ಟ್‌ನ ಹಿಂದಿನ ನಿರ್ದೇಶನಗಳನ್ನು ಅನುಸರಿಸಿ ಈ ಆದೇಶ ನೀಡಲಾಗುತ್ತಿದೆ. ಬುರುಡೆ ಗ್ಯಾಂಗ್ ಎಂದು ಕರೆಯಲ್ಪಡುವವರೊಂದಿಗೆ ಸಂಬಂಧ ಹೊಂದಿದ್ದಾರೆಂದು ಹೇಳಲಾದ ಸಾಮಾಜಿಕ ಕಾರ್ಯಕರ್ತ ಮಹೇಶ್ ಶೆಟ್ಟಿ ತಿಮರೋಡಿ, ಗಿರೀಶ್ ಮಟ್ಟಣ್ಣವರ್, ಜಯಂತ್ ಟಿ ಮತ್ತು ಇತರರು ಪ್ರಸಾರ ಮಾಡಿದ ಮಾನಹಾನಿಕರ ಹೇಳಿಕೆಗಳ ವಿರುದ್ಧ ಪರಿಹಾರ ಕೋರಿ ಡಿ. ಹರ್ಷೇಂದ್ರ ಕುಮಾರ್ ಅವರು ಸಲ್ಲಿಸಿದ್ದ ಅರ್ಜಿ ವಿಚಾರಣೆ ನಡೆಸಿ ಈ ಆದೇಶ ನೀಡಲಾಗಿದೆ. ವಿಡಿಯೋ, ವಾಟ್ಸ್ ಅಪ್ ಚಾಟ್‌ಗಳು, ಇನ್‌ಸ್ಟಾಗ್ರಾಮ್ ಪೋಸ್ಟ್‌ಗಳು ಮತ್ತು ಫೇಸ್‌ಬುಕ್ ರೀಲ್‌ಗಳನ್ನು ಪರಿಶೀಲಿಸಿದ ನಂತರ ನ್ಯಾಯಾಲಯವು ಆರೋಪಗಳು 'ಆಧಾರರಹಿತ ಮತ್ತು ಹಾನಿಕಾರಕ' ಎಂದು ತೀರ್ಪು ನೀಡಿದೆ.

## ರಾಜಕೀಯ ಲಾಭಕ್ಕಾಗಿ ಬಿಜೆಪಿ ಹರಸಾಹಸ– ದಿನೇಶ್ ಗುಂಡೂರಾವ್



ಮಂಗಳೂರು: ಶ್ರೀಕ್ಷೇತ್ರ ಧರ್ಮಸ್ಥಳದ ರಕ್ಷಣೆಗೆ ದೊಡ್ಡ ಸಮಾವೇಶ ಅನಗತ್ಯ ಶ್ರೀ ಮಂಜುನಾಥ ಸ್ವಾಮಿಗೆ ಇಂತಹ ಸಮಾವೇಶ ಬೇಕಾಗಿಲ್ಲ. ಶ್ರೀಕ್ಷೇತ್ರದ ರಕ್ಷಣೆಗೆ ಕರ್ನಾಟಕ ಸರಕಾರ ಇದೆ, ನಾವು ಇದ್ದೇವೆ ಎಂದು ಆರೋಗ್ಯ ಮತ್ತು ಕುಟಂಬ ಕಲ್ಯಾಣ, ದ.ಕ. ಜಿಲ್ಲಾ ಉಸ್ತುವಾರಿ ಸಚಿವ ದಿನೇಶ್ ಗುಂಡೂರಾವ್ ಎಂದು ಬಿಜೆಪಿಯನ್ನು ಕುಟುಕಿದ್ದಾರೆ. ಮಂಗಳೂರಿನಲ್ಲಿ ಸುದ್ದಿಗಾರರೊಂದಿಗೆ ಮಾತನಾಡಿದ ಅವರು ಬಿಜೆಪಿಯವರು ಆಯೋಜಿಸಿರುವ 'ಧರ್ಮಸ್ಥಳ ಚಲೋ' ಸ್ವಾರ್ಥ ರಾಜಕೀಯ ಲಾಭಕ್ಕಾಗಿ ಮಾಡುತ್ತಿರುವ ಹರಸಾಹಸ. ಬಿಜೆಪಿಯವರಿಗೆ ರಾಜಕೀಯವಾಗಿ ಲಾಭ ಮಾಡಿಕೊಳ್ಳಲು ಏನಾದರೂ ವಿವಾದ ಬೇಕು. ಆ ಕಾರಣಕ್ಕಾಗಿ ಧರ್ಮಸ್ಥಳ ವಿಚಾರವನ್ನು ಕೈಗೆತ್ತಿಕೊಂಡು ರಾಜಕೀಯ ಮಾಡುತ್ತಿದೆ. ಇದರಲ್ಲಿ ರಾಜ್ಯದ ಹಿತವೂ ಇಲ್ಲ ಜನತೆಯ ಹಿತವೂ ಇಲ್ಲ. ಬಿಜೆಪಿಗೆ ಜನರ ಬಗ್ಗೆ ಕಾಳಜಿ ಇದ್ದರೆ ಕೇಂದ್ರ ಸರ್ಕಾರಕ್ಕೆ ಒತ್ತಡ ಹಾಕಿ ಕರ್ನಾಟಕಕ್ಕೆ ಬರಬೇಕಾದ ಅನುದಾನ ತರಿಸಿಕೊಡುವ ಪ್ರಯತ್ನ ಮಾಡಲಿ, ಸ್ವಾರ್ಥ ರಾಜಕಾರಣವನ್ನು ರಾಜ್ಯದ ಜನತೆಯ ಪರವಾಗಿ ಹೋರಾಡಲಿ ಎಂದರು. ಬಿಜೆಪಿ ಕೇವಲ ಧಾರ್ಮಿಕ ವಿಚಾರಗಳನ್ನೇ ಮುಂದಿಟ್ಟುಕೊಂಡು ರಾಜಕೀಯ ಮಾಡುತ್ತಿದೆ. ಅದರ ಉದ್ದೇಶ ಏನು ಎಂದು ಎಲ್ಲರಿಗೂ ಗೊತ್ತಾಗಿದೆ ಎಂದರು.

## ವಿವೇಕಾನಂದ ಪ.ಪೂ. ಕಾಲೇಜಿನ ಬಾಲಕರ ತಂಡ ಖೋ–ಖೋದಲ್ಲಿ ಪ್ರಥಮ



ಕಡಬ : ಕಡಬ ತಾಲೂಕಿನ ಸವಣೂರಿನಲ್ಲಿ ನಡೆದ ತಾಲೂಕುಮಟ್ಟದ ದಸರಾ ಕ್ರೀಡಾಕೂಟದ ಖೋ–ಖೋ ಪಂದ್ಯಾಟದಲ್ಲಿ ವಿವೇಕಾನಂದ ಪದವಿಪೂರ್ವ ಕಾಲೇಜಿನ ಬಾಲಕರ ತಂಡ ಭಾಗವಹಿಸಿ ಪ್ರಥಮ ಸ್ಥಾನ ಪಡೆದು ಜಿಲ್ಲಾ ಮಟ್ಟಕ್ಕೆ ಆಯ್ಕೆಯಾಗಿರುತ್ತದೆ. ಈ ಪಂದ್ಯಾಟದಲ್ಲಿ ದ್ವಿತೀಯ ಪಿಯುಸಿ ವಿದ್ಯಾರ್ಥಿಗಳಾದ ಭವಿಷ್. ತೇಜಸ್ ಪಿ ಕೆ. ಸೃಜನ್, ಗೌತಮ್, ತರುಣ್, ವನೀಶ್, ಮಿಥುನ್ ಶೆಟ್ಟಿ ಹಾಗೂ ಪ್ರಥಮ ಪಿಯುಸಿ ವಿದ್ಯಾರ್ಥಿಗಳಾದ ತರುಣ್ ಕುಮಾರ್ ಬಿ ಆರ್. ದೇಕ್ಷಿತ್, ಮನ್ವಿತ್ ಕೆ ಎ. ಲಿಖಿತ್. ಕೀರ್ತನ್ ಇವರು ಭಾಗವಹಿಸಿದ್ದರು. ತಂಡವು ಕಾಲೇಜಿನ ದೈಹಿಕಶಿಕ್ಷಣ ನಿರ್ದೇಶಕರಾದ ರವಿಶಂಕರ್ ವಿ ಎಸ್. ಡಾ. ಜ್ಯೋತಿಕುಮಾರಿ ಮತ್ತು ಯತೀಶ್ ಇವರ ನೇತೃತ್ವದಲ್ಲಿ ತರಬೇತಿಯನ್ನು ಪಡೆದಿರುತ್ತದೆ. ಇವರನ್ನು ಕಾಲೇಜಿನ ಆಡಳಿತಮಂಡಳಿ, ಪ್ರಾಂಶುಪಾಲರು, ಉಪನ್ಯಾಸಕ, ಉಪನ್ಯಾಸಕೇತರ ವೃಂದದವವರು ಅಭಿನಂದಿಸಿದರು.

## ನೀರು ಕಲುಷಿತ, ಪರಿಹಾರಕ್ಕೆ ಸೂಚನೆ : ಐವನ್ ಡಿ'ಸೋಜಾ



ಮಂಗಳೂರು: KUIDFCಯಿಂದ 147 ಒಳಗಡೆ ಕಾಮಗಾರಿಗಳು ವಿಳಂಬಗೊಂಡು ಒಳಚರಂಡಿ ನೀರು ಸಾರ್ವಜನಿಕ ತೋಡುಗಳಲ್ಲಿ ಹರಿಯುತ್ತಿದ್ದು, ನೀರಿನ ಜೊತೆಯಲ್ಲಿ ಒಳಚರಂಡಿಯ ನೀರು ಹರಿಯುತ್ತಿದ್ದು ನಗರದಲ್ಲಿ ಉಂಟಾದ ಅತೀ ಮಳೆಯಿಂದ ಆರೋಗ್ಯದ ಮೇಲೆ ಪರಿಣಾಮ ಮತ್ತು ನಗರದ ಎಲ್ಲಾ ಬಾವಿಗಳ ನೀರು ಕಲುಷಿತಗೊಂಡು ಅನೇಕ ರೋಗರುಜಿನಗಳು ಉಂಟಾಗುತ್ತಿರುವುದರ ಬಗ್ಗೆ ಸಾರ್ವಜನಿಕ ದೂರಿನನ್ವಯ ಇಂದು ನಗರ ಪಾಲಿಕೆಯಲ್ಲಿ ವಿಧಾನ ಪರಿಷತ್ ಶಾಸಕರಾದ ಐವನ್ ಡಿ'ಸೋಜಾರವರ ಕಛೇರಿಯಲ್ಲಿ ಅವರ ನೇತೃತ್ವದಲ್ಲಿ ನಗರ ಪಾಲಿಕೆಯ ATPO ಮತ್ತು KBR ಕಾಂಟ್ರೆಕ್ಟರ್‌ಗಳು ಸಾರ್ವಜನಿಕ ಉದ್ದಿಮೆದಾರರಾದ ಅಶೋಕ್ ಮೆಂಡೋನ್ಸಾ, ಲುಯಿ ಜೆ. ಪಿಂಟೋ ಇವರುಗಳೊಂದಿಗೆ ವಿಸ್ತ್ರತವಾಗಿ ಚರ್ಚೆ ನಡೆಸಿ KUIDFC ಕೈಗೊಳ್ಳುವ ಕಾಮಗಾರಿಗಳು ಪೂರ್ಣಗೊಳ್ಳದಿರುವ ತೊಂದರೆಗಳ ಬಗ್ಗೆ ಚರ್ಚಿಸಲಾಯ್ತು ನಗರ ಪಾಲಿಕೆಯಿಂದ ಒಳಚರಂಡಿಯನ್ನು ಅಳವಡಿಸದೇ ಇರುವ ಸಮಸ್ಯೆಗಳ ಬಗ್ಗೆ ಚರ್ಚಿಸಿಲಾಯ್ತು.

## ಜಪ್ಪಿನಮೊಗರು ಗಣೇಶೋತ್ಸವ ಸಾಂ. ಕಾರ್ಯಕ್ರಮ ಉದ್ಘಾಟಿಸಿದ ಡಾ. ಎಂ.ಎನ್.ಆರ್



ಮಂಗಳೂರು : ಸಾರ್ವಜನಿಕ ಶ್ರೀ ಗಣೇಶೋತ್ಸವ ಸಮಿತಿ ಜಪ್ಪಿನಮೊಗರು ಇವರ 17ನೇ ವರ್ಷದ ಗಣೇಶೋತ್ಸವ ಸಾಂಸ್ಕೃತಿಕ ಕಾರ್ಯಕ್ರಮಗಳ ಉದ್ಘಾಟನೆಯನ್ನು ದೀಪ ಬೆಳಗಿಸಿ ಉದ್ಘಾಟಿಸಿದ ಡಾ। ಎಂ.ಎನ್. ರಾಜೇದ್ರ ಕುಮಾರ್ ಅಧ್ಯಕ್ಷರು ಎಸ್.ಸಿ.ಡಿ.ಸಿ.ಸಿ. ಬ್ಯಾಂಕ್ ಮಂಗಳೂರು ಮೂರು ದಿನಗಳವಿ ಜೃಭಣೆಯಿಂದ ನಡೆಯುವ ವಿವಿಧ ಸಾಂಸ್ಕೃತಿಕ ಕಾರ್ಯಕ್ರಮ ಹಾಗೂ ಧಾರ್ಮಿಕ ಸಭಾ ಕಾರ್ಯಕ್ರಮಗಳ ಉದ್ಘಾಟಿಸಿ ಮಾತನಾಡಿದ ರಾಜೇಂದ್ರ ಕುಮಾರ್ ಗಣೇಶನ್ನು ಪೂಜಿಸಿದರೆ ಭಕ್ತರ ಸಕಲ ವಿಘ್ನ ನಿವಾರಣೆವಾಗುವುದು ಎಂದರು. ಸಭೆಯ ಅಧ್ಯಕ್ಷತೆಯನ್ನು ಆತ್ಮಶಕ್ತಿ ವಿವಿದ್ದೋದ್ದೇಶ ಬ್ಯಾಂಕ್ (ನಿ) ಇದರ ಅಧ್ಯಕ್ಷ ಶ್ರೀ ಚಿತ್ತರಂಜನ್ ಬೋಳಾರ್ ವಹಿಸಿದ್ದು, ಮುಖ್ಯ ಅತಿಧಿಗಳಾಗಿ ದ.ಕ. ಜಿಲ್ಲಾ ಮಾಜಿ ಉಸ್ತುವಾರಿ ಸಚಿವರಾದ ಬಿ. ರಮಾನಾಥ ರೈ, ಉದ್ಯಮಿಗಳಾದ ಶ್ರೀ ಜಯಪ್ರಕಾಶ್ ತುಂಬೆ, ಶ್ರೀ ಅನಿಲ್ ಶೆಟ್ಟಿ ಮುನ್ನುತೋಟಗುತ್ತು ಗೌರವಾಧ್ಯಕ್ಷರು ಸಾರ್ವಜನಿಕ ಶ್ರೀ ಗಣೇಶೋತ್ಸವ ಸಮಿತಿ ಶ್ರೀ ಗುಣಪಾಲ ಜೈನ್ (ಮಾಜಿ ಯೋಧರು) ಶ್ರೀಮತಿ ಮಮತಾ ರಮೇಶ್ ಶೆಟ್ಟಿ ಗ್ರಂಥಪಾಲಕಿ, ಶ್ರೀಮತಿ ಸುಮನ ಶರಣ್ ನ್ಯಾಯವಾದಿ ಭಾಗವಹಿಸಿದ್ದರು.

## ಧಾರ್ಮಿಕ ಸಾಂಸ್ಕೃತಿಕ ಕಾರ್ಯಕ್ರಮಕ್ಕೆ ಅಡ್ಡಿ : ಬೃಹತ್ ಜನಾಗ್ರಹ ಸಭೆ



ಮಂಗಳೂರು:ಕಾನೂನಿನ ನೆಪದಲ್ಲಿ ಧಾರ್ಮಿಕ ಮತ್ತು ಸಾಂಸ್ಕೃತಿಕ ಕಾರ್ಯಕ್ರಮಗಳಿಗೆ ಪೊಲೀಸರು ಅಡ್ಡಿಪಡಿಸುತ್ತಿರುವುದನ್ನು ವಿರೋಧಿಸಿ ವಿವಿಧ ಸಂಘಟನೆಗಳ ನೇತ್ರತ್ವದಲ್ಲಿ ಸೆ.9ರಂದು ಬೃಹತ್ ಜನಾಗ್ರಹ ಸಭೆ ನಡೆಸಲು ತೀರ್ಮಾನಿಸಲಾಗಿದೆ. ವಿಶ್ವಹಿಂದೂ ಪರಿಷತ್ ನೇತೃತ್ವದಲ್ಲಿ ಮಂಗಳೂರಿನ ಶರವು ದೇವಸ್ಥಾನ ಬಳಿ ಬಾಲಂಭಟ್ ರಾಧಾಕೃಷ್ಣ ಸಭಾಂಗಣದಲ್ಲಿ ನಡೆದ ಸಮಾಲೋಚನ ಸಭೆಯಲ್ಲಿ ಈ ಕುರಿತಂತೆ ನಿರ್ಣಯ ಕೈಗೊಳ್ಳಲಾಗಿದೆ. ಈ ಸಮಾಲೋಚನ ಸಭೆಯಲ್ಲಿ ದ.ಕ.ಜಿಲ್ಲೆಯಲ್ಲಿ ಕಾನೂನಿನ ನೆಪದಲ್ಲಿ ಧಾರ್ಮಿಕ, ಸಾಂಸ್ಕೃತಿಕ ಕಾರ್ಯಕ್ರಮಗಳಿಗೆ ಅಡ್ಡಿ ಪಡಿಸುವುದು ಮಾತ್ರವಲ್ಲದೆ ಕೆಲವೊಂದು ಕಡೆ ಕಾರ್ಯಕ್ರಮಗಳನ್ನು ಅರ್ಧಕ್ಕೆ ನಿಲ್ಲಿಸಿರುವ ಘಟನೆಗಳು ನಡೆದಿದ್ದು ಈ ಹಿನ್ನೆಲೆಯಲ್ಲಿ ವಿವಿಧ ಬೇಡಿಕೆಗಳನ್ನು ಆಗ್ರಹಿಸಿ ಸೆ.9ರಂದು ಬೃಹತ್ ಜನಾಗ್ರಹ ಸಭೆ ನಡೆಸಲು ತೀರ್ಮಾನಿಸಲಾಗಿದೆ. ಹಲವಾರು ರಂಗಭೂಮಿ ಕಲಾವಿದರು, ಹಿಂದೂ ಸಂಘಟನೆ ಕಾರ್ಯಕರ್ತರು ಈ ಸಭೆಯಲ್ಲಿ ಪಾಲ್ಗೊಂಡು ಅಭಿಪ್ರಾಯ ತಿಳಿಸಿದರು. ಸಂಘಟನೆಯ ಪ್ರಮುಖರಾದ ಪ್ರಕಾಶ್ ಪಿ.ಎಸ್. ಮತ್ತು ಎಂ ಬಿ ಪುರಾಣಿಕರು ಮಾರ್ಗದರ್ಶನ ನೀಡಿದರು.

## ಸ್ವಾಮೀಜಿ ಹೆಸರು ಸೂಕ್ತ ಕಾಲಕ್ಕೆ ಬಯಲು:ಜಯಂತ್



ಮಂಗಳೂರು : ಧರ್ಮಸ್ಥಳ ಗ್ರಾಮದಲ್ಲಿ ಉತ್ಖನನಕ್ಕೂ ಮುನ್ನ ಬುರುಡೆ ಪ್ರಕರಣದ ಪ್ರಮುಖ ಆರೋಪಿ ಚಿನ್ನಯ್ಯನನ್ನು ಪ್ರತಿಷ್ಠಿತ ಸ್ವಾಮೀಜಿಯೊಬ್ಬರ ಬಳಿ ಕರೆದುಕೊಂಡು ಹೋಗಲಾಗಿತ್ತು. ಬುರುಡೆ ವಿಚಾರವಾಗಿ ಆ ಸ್ವಾಮೀಜಿಗೆ ಎಲ್ಲವೂ ಗೊತ್ತು. ಕಾಲ ಬಂದಾಗ ಸ್ವಾಮೀಜಿಯ ಹೆಸರನ್ನು ಬಹಿರಂಗಪಡಿಸುತ್ತೇವೆ' ಎಂದು ಪ್ರಕರಣದ ದೂರುದಾರ ಹಾಗೂ ಸೌಜನ್ಯ ಪರ ಹೋರಾಟಗಾರ ಜಯಂತ್ ಸ್ಫೋಟಕ ಹೇಳಿಕೆ ನೀಡಿದ್ದಾರೆ ಎಂದು ವರದಿಯಾಗಿದೆ. ಬೆಳ್ತಂಗಡಿಯಲ್ಲಿ ಮಾಧ್ಯಮಗಳ ಜೊತೆ ಅವರು ಮಾತನಾಡಿದರು. ಆ ಸ್ವಾಮೀಜಿ ಭೇಟಿ ವೇಳೆ ನಾನು ಹೋಗಿರಲಿಲ್ಲ. ಚಿನ್ನಯ್ಯ ಬೇರೆಯವರ ಜೊತೆ ಹೋಗಿದ್ದ. ಸ್ವಾಮೀಜಿ ಬಳಿ ಸುಳ್ಳು ಹೇಳಲು ಆಗುತ್ತಾ ? ಹೀಗಾಗಿ, ಚಿನ್ನಯ್ಯ ಅವರ ಬಳಿ ಎಲ್ಲವನ್ನೂ ಹೇಳಿದ್ದಾನೆ. ಅವರೊಬ್ಬ ಪ್ರತಿಷ್ಠಿತ ಸ್ವಾಮೀಜಿ. ಸದ್ಯಕ್ಕೆ ಅವರ ಹೆಸರನ್ನು ಬಹಿರಂಗಪಡಿಸುವುದಿಲ್ಲ. ಕಾಲ ಬಂದಾಗ ಸ್ವಾಮೀಜಿಯ ಹೆಸರನ್ನು ಬಹಿರಂಗಪಡಿಸುತ್ತೇವೆ'. 'ಧರ್ಮಸ್ಥಳ ಗ್ರಾಮದಲ್ಲಿ ನೂರಾರು ಅನಾಥ ಶವಗಳನ್ನು ಹೂತಿರುವ ಸ್ಥಳವು ಹೋರಾಟಗಾರ ಗಿರೀಶ್ ಮಟ್ಟಣ್ಣವರ್‌ಗೂ ಗೊತ್ತು. ಎಸ್‌ಐಟಿ ರಚನೆಗೂ ಮುಂಚೆ ಚಿನ್ನಯ್ಯನ ಜೊತೆಗೆ ಗಿರೀಶ್ ಮಟ್ಟಣ್ಣವರ್ ಕೂಡ ಉತ್ಖನನ ಮಾಡಿದ ಎಲ್ಲ ಸ್ಥಳಕ್ಕೆ ಭೇಟಿ ನೀಡಿದ್ದಾರೆ ಎಂದರು.

## ಕಪ್ಪೆಗಳ ನಾದ, ಸಂರಕ್ಷಣೆಯ ಪಾಠ: ಕಲಿಕಾ ಶಿಬಿರ ಯಶಸ್ವಿ



ಶಿವಮೊಗ್ಗ: ಪಶ್ಚಿಮಘಟ್ಟದ ಭಾಗವಾಗಿರುವ ಶಿವಮೊಗ್ಗ ಜಿಲ್ಲೆಯ ಹೊಸನಗರ ತಾಲೂಕಿನ ಗರ್ತಿಕೆರೆಯಲ್ಲಿ ಆಗಸ್ಟ್ 15–17ರವರೆಗೆ ಉಭಯ ಜೀವಿಗಳ ಬಗೆಗಿನ ವಸತಿ ಕಾರ್ಯಗಾರ, ವನ್ಯಜೀವಿ ಸಂಶೋಧಕ ಡಾ. ಅಮಿತ ಹೆಗಡೆಯವರ ನೇತೃತ್ವದಲ್ಲಿ ಯಶಸ್ವಿಯಾಗಿ ನಡೆಯಿತು. ಪಶ್ಚಿಮ ಘಟ್ಟಗಳು ಜೀವ ವೈವಿಧ್ಯತೆಯ ಖಜಾನೆಯಾಗಿದ್ದು, ಇದರಲ್ಲಿ ಉಭಯ ಜೀವಿಗಳು ವಿಶೇಷವಾಗಿ ಕಪ್ಪೆಗಳ ಅಧ್ಯಯನ, ದಾಖಲಾತಿ, ಅವುಗಳ ಸ್ವಭಾವ, ಸಂತಾನೋತ್ಪತ್ತಿ, ಹವಮಾನ ವೈಪರಿತ್ಯ ಹಾಗೂ ಸುತ್ತಮುತ್ತಲ ಸೂಕ್ಷ್ಮ ಬದಲಾವಣೆಗಳಿಂದ ಜೀವ ವೈವಿಧ್ಯತೆಯ ಮೇಲೆ ಆಗುವ ಪರಿಣಾಮಗಳ ಬಗ್ಗೆ ಮಾರ್ಗದರ್ಶನವನ್ನು ನೀಡಲಾಯಿತು. ಕಾರ್ಯಾಗಾರವು ಕೇವಲ ಶಿಕ್ಷಣಕ್ಕಷ್ಟೇ ಸೀಮಿತಗೊಳ್ಳದೆ ಸಂರಕ್ಷಣೆ ಹಾಗೂ ಪ್ರಕೃತಿಯೊಂದಿಗೆ ಗಾಢಬಾಂಧವ್ಯವನ್ನು ಬೆಳೆಸುವ ಬಗ್ಗೆ ಗಮನಹರಿಸಲಾಯಿತು.

# ಸುದ್ದಿ ತುಣುಕು

ತುಮಕೂರು ಡಿಸಿಸಿ ಬ್ಯಾಂಕ್ ಅಧ್ಯಕ್ಷರಾಗಿ ಮಾಜಿ ಸಚಿವ ಕೆ. ಎನ್. ರಾಜಣ್ಣ ಅವಿರೋಧವಾಗಿ ಆಯ್ಕೆಯಾಗಿದ್ದಾರೆ.

ಜಿಎಸ್‌ಟಿ ದರ ಇಳಿಕೆ ಮಾಡಿರುವ ಕೇಂದ್ರ ಸರ್ಕಾರದ ನಿರ್ಧಾರವನ್ನು ಸಾರಿಗೆ ಸಚಿವ ರಾಮಲಿಂಗಾರೆಡ್ಡಿ ಅವರು ಸ್ವಾಗತಿಸಲಿಲ್ಲವಾದರೂ, ಜನರಿಗೆ ಅನುಕೂಲವಾಗಲಿದೆ ಎಂದು ಹೇಳಿದರು.

ಸೆಪ್ಟಂಬರ್ 10 ರಿಂದ 17ರ ವರೆಗೆ ಮೈಸೂರಿನ ಮಾನಸ ಗಂಗೋತ್ರಿಯಲ್ಲಿ ಯುವ ಸಂಭ್ರಮ ನಡೆಯಲಿದ್ದು, ಈ ಕಾರ್ಯಕ್ರಮದ ಶೀರ್ಷಿಕೆ ಗೀತೆಯನ್ನು ಖ್ಯಾತ ಗಾಯಕ ವಿಜಯ್ ಪ್ರಕಾಶ್ ಹಾಡಿದ್ದಾರೆ.

ಕೆ.ಸಿ.ವ್ಯಾಲಿ ಎರಡನೇ ಹಂತದ ಯೋಜನೆಯಡಿ ಕೋಲಾರ ತಾಲೂಕಿನ 30 ಕೆರೆಗಳಿಗೆ ನೀರು ತುಂಬಿಸುವ ಯೋಜನೆಯನ್ನು ಸಿಎಂ ಸಿದ್ದರಾಮಯ್ಯ ಲೋಕಾರ್ಪಣೆಗೊಳಿಸಿದರು.

ಕೇಂದ್ರ ಸರ್ಕಾರದ ಜಿಎಸ್‌ಟಿ ಸರಳೀಕರಣವನ್ನು ಸ್ವಾಗತಿಸಿದ ಬಿಜೆಪಿ ರಾಜ್ಯಾಧ್ಯಕ್ಷ ಬಿ.ವೈ.ವಿಜಯೇಂದ್ರ ಅವರು, ರಾಜ್ಯ ಸರ್ಕಾರದ ವಿರುದ್ಧ ವಾಗ್ದಾಳಿ ನಡೆಸಿದರು.

ಮೈಸೂರು ದಸರಾಕ್ಕೆ ಆಗಮಿಸುವಂತೆ ಸಿಎಂ ಸಿದ್ದರಾಮಯ್ಯ ಅವರಿಗೆ ಸಚಿವ ಡಾ. ಹೆಚ್. ಸಿ. ಮಹದೇವಪ್ಪ ನೇತೃತ್ವದಲ್ಲಿ ಜಿಲ್ಲಾಡಳಿತದ ವತಿಯಿಂದ ಆಹ್ವಾನ ನೀಡಲಾಯಿತು.

ಸಕ್ಕರೆ ಉತ್ಪಾದನೆಯಲ್ಲಿ ಶೇ.20ರಷ್ಟು ಸೆಣಬಿನ ಚೀಲಗಳ ಬಳಕೆ ಕುರಿತು ಕೇಂದ್ರ ಸರ್ಕಾರ ಹೊರಡಿಸಿದ್ದ ಅಧಿಸೂಚನೆಯನ್ನು ರಾಜ್ಯ ಉಚ್ಚ ನ್ಯಾಯಾಲಯವು ಎತ್ತಿಹಿಡಿದಿದೆ.

ಕಾಂಗ್ರೆಸ್ ಶಾಸಕ ವೀರೇಂದ್ರ ಪಪ್ಪಿ ನಿವಾಸದ ಮೇಲೆ ದಾಳಿ ನಡೆಸಿರುವ ಜಾರಿ ನಿರ್ದೇಶನಾಲಯದ ಅಧಿಕಾರಿಗಳು 55 ಕೋಟಿ ರೂ. ಹಣ ಹಾಗೂ ಐದು ದುಬಾರಿ ಕಾರುಗಳನ್ನು ಜಪ್ತಿ ಮಾಡಿದ್ದಾರೆ.

ರಕ್ತಚಂದನ ತುಂಡುಗಳಿಗೆ ವಿವಿಧ ಕಂಪನಿಗಳ ಪ್ಲಾಸ್ಟಿಕ್ ರ್‍ಯಾಪರ್ ಸುತ್ತಿ ಹರಿಯಾಣ ರಾಜ್ಯಕ್ಕೆ ಕೊರಿಯರ್ ಮೂಲಕ ಕಳ್ಳ ಸಾಗಣೆ ಮಾಡಲು ಯತ್ನಿಸಿದ ಆರೋಪಿಗಳನ್ನು ಬಂಧಿಸುವಲ್ಲಿ ಹೊಸಕೋಟೆ ಠಾಣೆ ಪೊಲೀಸರು ಯಶಸ್ವಿಯಾಗಿದ್ದಾರೆ.

ಬಿಜೆಪಿ ಶಾಸಕ ಮುನಿರತ್ನ ವಿರುದ್ಧ ದಾಖಲಾದ ಸಾಮೂಹಿಕ ಅತ್ಯಾಚಾರ ಆರೋಪ ಪ್ರಕರಣದಲ್ಲಿ ವಿಶೇಷ ತನಿಖಾ ತಂಡವು ಬಿ ರಿಪೋರ್ಟ್ ಸಲ್ಲಿಸಿದೆ.

ನಾಗಮಂಗಲದಲ್ಲಿ ನಿರ್ದಿಷ್ಟ ಮಾರ್ಗದಲ್ಲಿ ಗಣೇಶ ನಿಮಜ್ಜನ ಮೆರವಣಿಗೆ ಮಾಡಲು ಅನುಮತಿ ಕೋರಿದ್ದ ಮನವಿಯನ್ನು ರಾಜ್ಯ ಉಚ್ಚ ನ್ಯಾಯಾಲಯವು ತಿರಸ್ಕರಿಸಿದೆ.

ನಟ ದರ್ಶನ್‌ಗೆ ಹೆಚ್ಚುವರಿ ಹಾಸಿಗೆ ದಿಂಬು, ಬಳ್ಳಾರಿ ಜೈಲಿಗೆ ವರ್ಗ ಮಾಡುವ ಅರ್ಜಿಗಳ ವಿಚಾರಣೆ ಮುಗಿದಿದ್ದು, ಆದೇಶವನ್ನು ಸೆಪ್ಟಂಬರ್ 9ಕ್ಕೆ ಕೋರ್ಟ್ ಕಾಯ್ದಿರಿಸಿದೆ.

ಧರ್ಮಸ್ಥಳ ಕ್ಷೇತ್ರ ರಾಜಕೀಯ ವಸ್ತುವಲ್ಲ, ಶ್ರೀ ಕ್ಷೇತ್ರದ ರಕ್ಷಣೆಯ ಹೆಸರಿನಲ್ಲಿ ರಾಜಕೀಯ ಮಾಡಲು ಹೊರಟಿರುವವರಿಗೆ ನಾಚಿಕೆಯಾಗಬೇಕು ಎಂದು ಮಾಜಿ ಸಂಸದ ಡಿ.ಕೆ.ಸುರೇಶ್ ಹೇಳಿದರು.

# ಮಟನ್ ಪೆಪ್ಪರ್



**ಬೇಕಾಗುವ ಸಾಮಾಗ್ರಿಗಳು :**
ಮಟನ್ – 500 ಗ್ರಾಮ್
ಈರುಳ್ಳಿ – 3
ಟೊಮೇಟೊ – 2
ಶುಂಠಿ, ಬೆಳ್ಳುಳ್ಳಿ ಪೇಸ್ಟ್ – 2 ಚಮಚ
ಅರಶಿನ – 1/2 ಚಮಚ
ಮೆಣಸಿನ ಪುಡಿ – 3 ಚಮಚ
ಕರಿಮೆಣಸಿನ ಪುಡಿ – 2 ಚಮಚ
ಕರಿಬೇವು – ಸ್ವಲ್ಪ
ಕೊತ್ತಂಬರಿ ಸೊಪ್ಪು – ಸ್ವಲ್ಪ
ಜೀರಿಗೆ – 1 ಚಮಚ
ದಾಲ್ಚೀನಿ – 1 ಇಂಚು
ಲವಂಗ – 2–4
ಏಲಕ್ಕಿ – 2
ಉಪ್ಪು – ರುಚಿಗೆ ತಕ್ಕಷ್ಟು
ಎಣ್ಣೆ – 4–5 ಚಮಚ

**ಮಾಡುವ ವಿಧಾನ :**
ಮೊದಲಿಗೆ ಮಟನ್‌ಗೆ ಅರಶಿನ, ಉಪ್ಪು ಹಾಗೂ 3ಕಪ್‌ನಷ್ಟು ನೀರು ಸೇರಿಸಿ 15 ನಿಮಿಷಗಳ ಕಾಲ ಮಂದ ಉರಿಯಲ್ಲಿ ಬೇಯಿಸಿಕೊಳ್ಳಬೇಕು. ನಂತರ ಒಂದು ಬಾಣಲೆಗೆ ಸ್ವಲ್ಪ ಎಣ್ಣೆ ಹಾಕಿ ಬಿಸಿಯಾದ ನಂತರ ಜೀರಿಗೆ, ಲವಂಗ ಮತ್ತು ಏಲಕ್ಕಿಯನ್ನು ಫ್ರೈ ಮಾಡಿ ನಂತರ ಅವುಗಳನ್ನು ನುಣ್ಣಗೆ ಪುಡಿ ಮಾಡಿಕೊಳ್ಳಬೇಕು. ನಂತರ ಅದೇ ಬಾಣಲೆಯಲ್ಲಿ ಎಣ್ಣೆಯನ್ನು ಬಿಸಿ ಮಾಡಿಕೊಂಡು ಅದಕ್ಕೆ ಕರಿಬೇವು ಹಾಕಿ, ಅದಕ್ಕೆ ಕತ್ತರಿಸಿದ ಈರುಳ್ಳಿ ಹಾಕಿ ಕೆಂಪಗಾಗುವಂತೆ ಹುರಿದುಕೊಳ್ಳಬೇಕು. ನಂತರ ಶುಂಠಿ, ಬೆಳ್ಳುಳ್ಳಿ ಪೇಸ್ಟ್ ಸೇರಿಸಿ 2 ನಿಮಿಷಗಳ ಕಾಲ ಹುರಿಯಬೇಕು. ನಂತರ ಅದಕ್ಕೆ ಬೇಯಿಸಿದ ಮಟನ್ ತುಂಡುಗಳನ್ನು ಸೇರಿಸಿ ಚೆನ್ನಾಗಿ ಹುರಿದುಕೊಳ್ಳಬೇಕು. ನಂತರ ಟೊಮೇಟೊ, ಮೆಣಸಿನ ಪುಡಿ ಮತ್ತು ಪುಡಿ ಮಾಡಿದ ಮಸಾಲೆಯನ್ನು ಚೆನ್ನಾಗಿ ಮಿಶ್ರ ಮಾಡಬೇಕು. ನಂತರ ಕಾಳುಮೆಣಸಿನ ಪುಡಿಯನ್ನು ಹಾಕಿ 2–3ನಿಮಿಷಗಳ ಕಾಲ ಬೇಯಿಸಿದರೆ ರುಚಿಯಾದ ಮಟನ್ ಪೆಪ್ಪರ್ ಸವಿಯಲು ಸಿದ್ಧ.

# ರಷ್ಯಾಗೆ ದುಂಬಾಲು ಬಿದ್ದ ಪಾಕ್ ಪ್ರಧಾನಿ



ನವದೆಹಲಿ: ಶಾಂಘೈ ಶೃಂಗ ಸಭೆಯಲ್ಲಿ ಭಾರತ ಪ್ರಧಾನಿ ಮೋದಿ ಮತ್ತು ರಷ್ಯಾ ಅಧ್ಯಕ್ಷ ವ್ಲಾಡಿಮಿರ್ ಪುಟಿನ್ ನಡುವಿನ ಸ್ನೇಹ ಸಂಬಂಧ ನೋಡಿ ಹೊಟ್ಟೆ ಉರಿದುಕೊಂಡಿರುವ ಪಾಕಿಸ್ತಾನ ಪ್ರಧಾನಿ ಶಹಬಾಜ್ ಷರೀಫ್ ನಮ್ಮ ಜೊತೆಗೂ ಉತ್ತಮ ಸಂಬಂಧವಿಟ್ಟುಕೊಳ್ಳಿ ಎಂದು ರಷ್ಯಾಗೆ ದುಂಬಾಲು ಬಿದ್ದಿದ್ದಾರೆ. ಶಾಂಘೈ ಶೃಂಗ ಸಭೆಯಲ್ಲಿ ಪಾಕಿಸ್ತಾನ ಪ್ರಧಾನಿ ಎದುರಿಗೇ ಇದ್ದರೂ ಕ್ಯಾರೇ ಎನ್ನದೇ ಮೋದಿ–ಪುಟಿನ್ ಮಾತುಕತೆಯಲ್ಲಿ ತೊಡಗಿಸಿಕೊಂಡಿದ್ದರು. ಅವರನ್ನು ಶಹಬಾಜ್ ಷರೀಫ್ ದಿಟ್ಟಿಸಿ ನೋಡಿದ ವಿಡಿಯೋ ಸೋಷಿಯಲ್ ಮೀಡಿಯಾದಲ್ಲೂ ವೈರಲ್ ಆಗಿತ್ತು. ಇದರ ಬೆನ್ನಲ್ಲೇ ಈಗ ಷರೀಫ್ ಕೂಡಾ ರಷ್ಯಾ ಅಧ್ಯಕ್ಷ ಪುಟಿನ್‌ರನ್ನು ಭೇಟಿ ಮಾಡಿದ್ದರು.

# ನಂಬಲಸಾಧ್ಯವಾದ ರಿಯಾಯಿತಿ ಘೋಷಿಸಿದ ರಷ್ಯಾ




ಮಾಸ್ಕೋ: ಭಾರತ ಮತ್ತು ರಷ್ಯಾದ ಕಚ್ಚಾತೈಲ ಸಂಬಂಧಕ್ಕೆ ಅಂತ್ಯಹಾಡಬೇಕು ಎಂದು ಅಮೆರಿಕ ಅದೆಷ್ಟು ಪ್ರಯತ್ನ ಮಾಡುತ್ತದೆಯೋ, ಅದಕ್ಕೆ ವ್ಯತರಿಕ್ತವಾಗಿ ಉಭಯ ರಾಷ್ಟ್ರಗಳ ತೈಲ ಸಂಬಂಧ ಅಷ್ಟೇ ಗಟ್ಟಿಯಾಗುತ್ತಿದೆ. ಕೆಲ ದಿನಗಳ ಹಿಂದಷ್ಟೇ ಈ ದೋಸ್ತಿಗೆ ಸಾಕ್ಷಿಯಾಗಿ ಭಾರತಕ್ಕೆ ಕಚ್ಚಾತೈಲ ರಿಯಾಯಿತಿ ಘೋಷಿಸಿದ್ದ ರಷ್ಯಾ, ಈಗ ಮತ್ತಷ್ಟು ರಿಯಾಯಿತಿಗೆ ಮುಂದಾಗಿದೆ. ಭಾರತ ಇನ್ನೂ ಅಮೇರಿಕದ ಸುಂಕದ ಹೊರೆಯನ್ನು ಎದುರಿಸುತ್ತಿರುವುದರಿಂದ, ಭಾರತಕ್ಕೆ ರಷ್ಯಾದ ತೈಲದ ಬೆಲೆ ಬ್ಯಾರೆಲ್‌ಗೆ 3 ರಿಂದ 4 ಅಮೆರಿಕನ್ ಡಾಲರ್‌ನಷ್ಟು ಕಡಿಮೆ ಮಾಡಲು ರಷ್ಯಾ ನಿರ್ಧರಿಸಿದೆ.

# ಕಚ್ಚತೀವು ದ್ವೀಪಕ್ಕೆ ಭೇಟಿ ನೀಡಿದ ಶ್ರೀಲಂಕಾ ಅಧ್ಯಕ್ಷ



ಕೊಲಂಬೋ :ನಟ–ರಾಜಕಾರಣಿ ವಿಜಯ್ ಅವರು ಭಾರತದ ಗಡಿಯಲ್ಲಿನ ಭೂಪ್ರದೇಶವನ್ನು ಮರಳಿ ಪಡೆಯುವ ಬಗ್ಗೆ ಚರ್ಚೆಯನ್ನು ಮತ್ತೆ ಹುಟ್ಟುಹಾಕಿದ ಕೆಲವೇ ದಿನಗಳ ಬಳಿಕ ಶ್ರೀಲಂಕಾದ ಅಧ್ಯಕ್ಷ ಅನುರ ಕುಮಾರ ದಿಸಾನಾಯಕೆ ವಿವಾದಿತ ಕಚ್ಚತೀವು ದ್ವೀಪಕ್ಕೆ ಅನಿರೀಕ್ಷಿತ ಭೇಟಿ ನೀಡಿದರು. ಮಾಯಿಲಿಡಿ ಮೀನುಗಾರಿಕಾ ಬಂದರಿನ ಕಲ್ಯಾಣ ಕಾರ್ಯಕ್ರಮಗಳನ್ನು ಪ್ರಾರಂಭಿಸಲು ಮತ್ತು ವಿಸ್ತರಣೆಯನ್ನು ಪರಿಶೀಲಿಸಲು ಜಾಫ್ನಾಗೆ ತೆರಳಿದ್ದ ಶ್ರೀಲಂಕಾ ಅಧ್ಯಕ್ಷ ದಿಸಾನಾಯಕೆ, ಹಿರಿಯ ರಕ್ಷಣಾ ಅಧಿಕಾರಿಗಳೊಂದಿಗೆ ನೌಕಾಪಡೆಯ ಸ್ಪೀಡ್‌ಬೋಟ್‌ನಲ್ಲಿ ಕಚ್ಚತೀವು ದ್ವೀಪಕ್ಕೆ ಪ್ರಯಾಣಿಸಿದರು.

# ದ್ವಿಮುಖ ನೀತಿ ಬಿಡಿ ಎಂದು ಪಾಕಿಸ್ತಾನಕ್ಕೆ ಮೋದಿ ಕಾಪಾಳಮೋಕ್ಷ



ತಿಯಾಂಜಿನ್: "ಭಯೋತ್ಪಾದನೆಯ ವಿರುದ್ಧ ದ್ವಿಮುಖ ನೀತಿಯನ್ನು ಅನುಸರಿಸಬಾರದು' ಎಂದು ಪ್ರಧಾನಿ ಮೋದಿ ಅವರು ಚೀನದ ತಿಯಾಂಜಿನ್‌ನಲ್ಲಿ ನಡೆದ ಶಾಂಘೈ ಶೃಂಗ ಸಭೆಯಲ್ಲಿ ಹೇಳಿದ್ದಾರೆ. ಈ ಮೂಲಕ ಚೀನ ಹಾಗೂ ಪಾಕಿಸ್ಥಾನಕ್ಕೆ ತಿರುಗೇಟು ನೀಡಿದ್ದಾರೆ. "ಪಹಲ್ಗಾಮ್‌ನಲ್ಲಿ ನಡೆದ ದಾಳಿ ಕೇವಲ ಭಾರತದ ಮೇಲಿನ ದಾಳಿಯಲ್ಲ, ಮಾನವೀಯತೆಯ ಮೇಲೆ ನಂಬಿಕೆಯನ್ನಿಡುವ ಎಲ್ಲ ದೇಶಗಳಿಗೂ ಬಹಿರಂಗ ಸವಾಲಾಗಿತ್ತು. ಹೀಗಾಗಿ ಭಯೋತ್ಪಾದನೆ ವಿರುದ್ಧ ದ್ವಿಮುಖ ನೀತಿ, ನಿಲುವುಗಳನ್ನು ಎಲ್ಲರೂ ಒಮ್ಮತದಿಂದ ತಿರಸ್ಕರಿಸಬೇಕು. ಇದು ಮಾನವೀಯತೆಯತ್ತ ನಮ್ಮ ಕರ್ತವ್ಯವಾಗಿದೆ' ಎಂದಿದ್ದಾರೆ.

# ಪಾಕಿಸ್ತಾನದ ಜೊತೆಗಿನ ಡೊನಾಲ್ಡ್ ಟ್ರಂಪ್ ? ಫ್ಯಾಮಿಲಿ ಬ್ಯುಸಿನೆಸ್'!



ವಾಷಿಂಗ್ಟನ್ ಡಿಸಿ: ಅಮೆರಿಕದ ಮಾಜಿ ರಾಷ್ಟ್ರೀಯ ಭದ್ರತಾ ಸಲಹೆಗಾರ (ಎನ್‌ಎಸ್‌ಎ) ಮತ್ತು ವಕೀಲ ಜೇಕ್ ಸುಲ್ಲಿವನ್ ಅವರು, ಭಾರತವನ್ನು ದೂರ ತಳ್ಳುತ್ತಿರುವ ಅಧ್ಯಕ್ಷ ಡೊನಾಲ್ಡ್ ಟ್ರಂಪ್ ವಿರುದ್ಧ ತೀವ್ರ ವಾಗ್ದಾಳಿ ನಡೆಸಿದ್ದಾರೆ. ಸಂದರ್ಶನವೊಂದರಲ್ಲಿ ಸುಲ್ಲಿವನ್ ಅವರು, ಪಾಕಿಸ್ತಾನದಲ್ಲಿ ಟ್ರಂಪ್ ಕುಟುಂಬದ ವಾಣಿಜ್ಯ ಹಿತಾಸಕ್ತಿಗಳ ರಹಸ್ಯವನ್ನು ಬಿಚ್ಚಿಟ್ಟಿದ್ದಾರೆ. ಅಮೆರಿಕದ ಮಾಜಿ ಎನ್‌ಎಸ್‌ಎ ಜೇಕ್ ಸುಲ್ಲಿವನ್, 'ಪಾಕಿಸ್ತಾನದಲ್ಲಿ ಟ್ರಂಪ್ ಕುಟುಂಬದ ವ್ಯಾಪಾರ ಸಂಬಂಧಗಳಿದ್ದು, ತಮ್ಮ ಕುಟುಂಬದ ವಾಣಿಜ್ಯ ಹಿತಾಸಕ್ತಿಗಳನ್ನು ಕಾಪಾಡಲು ಡೊನಾಲ್ಡ್ ಟ್ರಂಪ್ ಭಾರತವನ್ನು ದೂರ ತಳ್ಳುತ್ತಿದ್ದಾರೆ' ಎಂದು ಗಂಭೀರ ಆರೋಪ ಮಾಡಿದ್ದಾರೆ.

# ಸುಡಾನ್‌ನಲ್ಲಿ ಭಾರೀ ಭೂಕುಸಿತಕ್ಕೆ ಹಳ್ಳಿಗೆ ಹಳ್ಳಿಯೇ ನೆಲಸಮ



ಸುಡಾನ್: ಸುಡಾನ್‌ನ ಪಶ್ಚಿಮ ಡಾರ್ಫರ್ ಪ್ರದೇಶದಲ್ಲಿ ಸಂಭವಿಸಿದ ಭಾರಿ ಭೂಕುಸಿತದಲ್ಲಿ 1,000 ಕ್ಕೂ ಹೆಚ್ಚು ಜನರು ಸಾವನ್ನಪ್ಪಿದ್ದಾರೆ. ಕೇವಲ ಒಬ್ಬ ಬದುಕುಳಿದಿದ್ದಾನೆ ಎಂದು ಸೇರಿಸಲಾಗಿದೆ ಎಂದು ಪ್ರದೇಶವನ್ನು ನಿಯಂತ್ರಿಸುವ ಬಂಡುಕೋರ ಗುಂಪು ತಿಳಿಸಿದೆ. ಮರ್ರಾ ಪರ್ವತಗಳಲ್ಲಿರುವ ತಾರಾಸಿನ್ ಗ್ರಾಮವನ್ನು ಧ್ವಂಸಗೊಳಿಸಿದ ದಿನಗಳ ನಂತರ ಭಾನುವಾರ ಈ ವಿಪತ್ತು ಸಂಭವಿಸಿದೆ ಎಂದು ಸುಡಾನ್ ವಿಮೋಚನಾ ಸೇನೆ ಹೇಳಿಕೆಯಲ್ಲಿ ತಿಳಿಸಿದೆ. ಮಾಹಿತಿಯ ಪ್ರಕಾರ ಎಲ್ಲಾ ಹಳ್ಳಿಯ ನಿವಾಸಿಗಳು ಸಾವನ್ನಪ್ಪಿದ್ದಾರೆ.

# ಅಮೆರಿಕ ಅಧಿಕಾರಿಗಳಿಗೆ ಬಿಸಿ ಮುಟ್ಟಿಸಿದ ಯಹೂದಿಗಳು



ನ್ಯೂಯಾರ್ಕ್ : ರಷ್ಯಾ ತೈಲ ಖರೀದಿಗೆ ಭಾರತವನ್ನು ಟೀಕಿಸಿದ್ದಕ್ಕಾಗಿ ಅಮೆರಿಕದ ಅಧಿಕಾರಿಗಳನ್ನು ಅಮೆರಿಕದ ಯಹೂದಿ ವಕಾಲತ್ತು ಗುಂಪು ತರಾಟೆಗೆ ತೆಗೆದುಕೊಂಡಿದೆ. ರಷ್ಯಾ–ಉಕ್ರೇನ್ ಸಂಘರ್ಷಕ್ಕೆ ನವದೆಹಲಿ ಜವಾಬ್ದಾರಿಯಲ್ಲ ಎಂದು ಪ್ರತಿಪಾದಿಸಿರುವ ಗುಂಪು ಅಮೆರಿಕ–ಭಾರತ ಸಂಬಂಧಗಳನ್ನು ಮರುಹೊಂದಿಸಲು ಕರೆ ನೀಡಿದೆ. ಟ್ರಂಪ್ ಆಡಳಿತ ಸದಸ್ಯರು ಇತ್ತೀಚೆಗೆ ಮಾಸ್ಕೋದಿಂದ ಇಂಧನ ಖರೀದಿಸಿದ್ದಕ್ಕಾಗಿ ಭಾರತದ ವಿರುದ್ಧ ತಮ್ಮ ಟೀಕೆಗಳನ್ನು ಹೆಚ್ಚಿಸಿದ್ದಾರೆ, ಇದು ಉಕ್ರೇನ್ ಸಂಘರ್ಷದಲ್ಲಿ ರಷ್ಯಾದ ಅಧ್ಯಕ್ಷ ವ್ಲಾಡಿಮಿರ್ ಪುಟಿನ್ ಅವರ ಯುದ್ಧ ಯಂತ್ರಕ್ಕೆ ನಿಧಿ ನೀಡುತ್ತಿದೆ ಎಂದು ಹೇಳಿದ್ದಾರೆ.

# ವಿಶ್ವ ಬ್ಯಾಡ್ಮಿಂಟನ್ ಚಾಂಪಿಯನ್‌ಶಿಪ್ ಬೆಳ್ಳಿ ಗೆದ್ದ ಸಾತ್ವಿಕ್–ಚಿರಾಗ್



ಪ್ಯಾರಿಸ್ : ಪ್ಯಾರಿಸ್‌ನಲ್ಲಿ ನಡೆದ 2025ರ ವಿಶ್ವ ಬ್ಯಾಡ್ಮಿಂಟನ್ ಚಾಂಪಿಯನ್‌ಶಿಪ್‌ನಲ್ಲಿ ಭಾರತದ ಸಾತ್ವಿಕ್ ಸಾಯಿರಾಜ್ ರಾಂಕಿರೆಡ್ಡಿ ಮತ್ತು ಚಿರಾಗ್ ಶೆಟ್ಟಿ ಕಂಚಿನ ಪದಕ ಗೆದ್ದುಕೊಂಡಿದ್ದಾರೆ. ಈ ಪದಕದೊಂದಿಗೆ ವಿಶ್ವ ಬ್ಯಾಡ್ಮಿಂಟನ್ ಚಾಂಪಿಯನ್‌ಶಿಪ್ ಡಬಲ್ಸ್‌ನಲ್ಲಿ ಭಾರತದ ಪರ ಎರಡು ಪದಕಗಳನ್ನು ಗೆದ್ದ ಮೊದಲ ಜೋಡಿ ಎಂಬ ಹೆಗ್ಗಳಿಕೆಗೆ ಸಾತ್ವಿಕ್–ಚಿರಾಗ್ ಪಾತ್ರರಾಗಿದ್ದಾರೆ. ಇದಕ್ಕೂ ಮುನ್ನ 2022 ರಲ್ಲಿ ಸಾತ್ವಿಕ್ ಸಾಯಿರಾಜ್ ರಾಂಕಿರೆಡ್ಡಿ ಮತ್ತು ಚಿರಾಗ್ ಶೆಟ್ಟಿ ಕಂಚಿನ ಪದಕ ಗೆದ್ದಿದ್ದರು.

# ಶೀಘ್ರವೇ 18,500 ಶಿಕ್ಷಕರ ನೇಮಕಾತಿಗೆ ಸರಕಾರದಿಂದ ಕ್ರಮ!



ಶಿವಮೊಗ್ಗ : ಶಿಕ್ಷಕ ಹುದ್ದೆ ಆಕಾಂಕ್ಷಿಗಳಿಗೆ ಸಚಿವ ಮಧು ಬಂಗಾರಪ್ಪ ಸಿಹಿಸುದ್ದಿ ನೀಡಿದ್ದು, ರಾಜ್ಯದಲ್ಲಿ ಶೀಘ್ರವೇ 18, 500 ಶಿಕ್ಷಕರ ನೇಮಕಾತಿಗೆ ಕ್ರಮ ಕೈಗೊಳ್ಳಲಾಗುತ್ತದೆ ಎಂದು ಹೇಳಿದರು. ಶಿಕ್ಷಣ ಇಲಾಖೆಯಲ್ಲಿ ಶಿಕ್ಷಣದ ಕೊರತೆಯನ್ನು ಹೋಗಲಾಡಿಸಿ ಶೈಕ್ಷಣಿಕ ಚಟುವಟಿಕೆಗಳಿಗೆ ಯಾವುದೇ ಅಡ್ಡಿಯಾಗದಂತೆ ತಕ್ಷಣದ ಕ್ರಮವಾಗಿ 13000ಶಿಕ್ಷಕರನ್ನು ನಿಯೋಜಿಸಲಾಗಿದೆ. ಅಲ್ಲದೇ ಶೀಘ್ರದಲ್ಲಿ 18500 ಶಿಕ್ಷಕರ ನೇಮಕಾತಿಗೂ ಕ್ರಮ ಕೈಗೊಳ್ಳಲಾಗಿದೆ ಎಂದು ಶಿಕ್ಷಣ ಸಚಿವ ಮಧು ಬಂಗಾರಪ್ಪ ಹೇಳಿದರು. ಮಕ್ಕಳ ಕಲಿಕೆಗೆ ಅಡಚಣೆಯಾಗದಂತೆ ಶಿಕ್ಷಕರ ಸೇವೆಯನ್ನು ಬಳಸಿಕೊಳ್ಳಲಾಗುವುದು ಎಂದರು.

# ಕೃಷ್ಣಾ ಮೇಲ್ದಂಡೆ ಯೋಜನೆಯ ಕಾಮಗಾರಿ ಸಭೆ: ವಾಗ್ವಾದ




ಬೆಂಗಳೂರು: ಕೃಷ್ಣಾ ಮೇಲ್ದಂಡೆ ಯೋಜನೆಯ ಮೂರನೇ ಹಂತದ ಕಾಮಗಾರಿಗಳಿಗೆ ಸಂಬಂಧಿಸಿದಂತೆ ನಡೆದ ಪ್ರಗತಿ ಪರಿಶೀಲನಾ ಸಭೆಯಲ್ಲಿ ಡಿಸಿಎಂ ಡಿ.ಕೆ.ಶಿವಕುಮಾರ್ ಹಾಗೂ ಅಬಕಾರಿ ಸಚಿವ ಆರ್.ಬಿ.ತಿಮ್ಮಾಪುರ್ ನಡುವೆ ವಾಗ್ವಾದ ನಡೆದ ಪ್ರಸಂಗ ವಿಧಾನಸೌಧದಲ್ಲಿ ನಡೆಯಿತು. ಯೋಜನೆಯ 3ನೇ ಹಂತದ ಅನುಷ್ಠಾನಕ್ಕೆ ಸಂಬಂಧಿಸಿದಂತೆ ಭೂ ಸ್ವಾಧೀನ, ಪುನರ್ ವಸತಿ, ಪುನರ್ ನಿರ್ಮಾಣ, ಭೂ ಪರಿಹಾರ, ವಿವಿಧ ನ್ಯಾಯಾಲಯಗಳಲ್ಲಿ ಹೆಚ್ಚುವರಿ ಪರಿಹಾರ ಕೋರಿ ದಾಖಲಿಸಿರುವ ಪ್ರಕರಣಗಳ ಕುರಿತು ಜಲಸಂಪನ್ಮೂಲ ಸಚಿವರೂ ಆಗಿರುವ ಡಿಸಿಎಂ ಡಿ.ಕೆ.ಶಿವಕವಾರ್ ಸಮ್ಮೇಳನ ಸಭಾಂಗಣದಲ್ಲಿ ಸಭೆ ಕರೆದಿದ್ದರು.

# ಖಜಾನೆ ಖಾಲಿಯಾಗಿದ್ದರೂ ಸರ್ಕಾರ ಹೆಲಿಕಾಪ್ಟರ್, ಜೆಟ್ ಖರೀದಿ!




ಬೆಂಗಳೂರು: "ಹೊಟ್ಟೆಗೆ ಹಿಟ್ಟಿಲ್ಲ ಜುಟ್ಟಿಗೆ ಮಲ್ಲಿಗೆ" ಎನ್ನುವಂತೆ, ಸರ್ಕಾರ ಸ್ವಂತ ಹೆಲಿಕಾಪ್ಟರ್, ಜೆಟ್ ಖರೀದಿ ಮಾಡಲು ಹೊರಟಿರುವುದು ಹಾಸ್ಯಾಸ್ಪದ ಮತ್ತು ನಾಚಿಕೆಗೇಡು ಎಂದು ಬಿಜೆಪಿ ರಾಜ್ಯ ಸರ್ಕಾರವನ್ನು ಟೀಕೆ ಮಾಡಿದೆ. ಸಾಮಾಜಿಕ ಜಾಲತಾಣ ಎಕ್ಸ್ ನಲ್ಲಿ ಪೋಸ್ಟ್ ಮಾಡಿರುವ ವಿಧಾನಸಭೆ ವಿರೋಧ ಪಕ್ಷದ ನಾಯಕ ಆರ್.ಅಶೋಕ್ ಅವರು, ಹೆಲಿಕಾಪ್ಟರ್ ಖರೀದಿಸುವ, ಗುತ್ತಿಗೆ ಪಡೆಯುವ ಸರ್ಕಾರದ ನಿರ್ಧಾರವನ್ನು ಟೀಕಿಸಿದ್ದಾರೆ. ಹೊಟ್ಟೆಗೆ ಹಿಟ್ಟಿಲ್ಲ ಜುಟ್ಟಿಗೆ ಮಲ್ಲಿಗೆ" ಎನ್ನುವಂತಾಗಿದೆ ಸರ್ಕಾರದ ನಡೆ. ಕಾಂಗ್ರೆಸ್ ಸರ್ಕಾರದ ಲಜ್ಜೆಗೆಟ್ಟ ಧೋರಣೆಗೆ ಕನ್ನಡಿಗರು ರೋಸಿ ಹೋಗಿದ್ದಾರೆಂದು ಕಿಡಿಕಾರಿದ್ದಾರೆ.

# 1,275 ಸ್ಥಳಗಳನ್ನು 'ಪ್ರವಾಸಿ ತಾಣ'ಗಳಾಗಿ ಘೋಷಿಸಿದ ಸರ್ಕಾರ



ಬೆಂಗಳೂರು: ಕರ್ನಾಟಕ ಪ್ರವಾಸೋದ್ಯಮ ನೀತಿ 2024–29ರಡಿಯಲ್ಲಿ ರಾಜ್ಯದ 1,275 ಸ್ಥಳಗಳನ್ನು ಪ್ರವಾಸಿ ತಾಣಗಳೆಂಬುದಾಗಿ ಘೋಷಣೆ ಮಾಡಿದೆ. ಈ ಕುರಿತಂತೆ ರಾಜ್ಯ ಪ್ರವಾಸೋದ್ಯಮ ಇಲಾಖೆಯ ಸರ್ಕಾರದ ಅಧೀನ ಕಾರ್ಯದರ್ಶಿ ನಡವಳಿಯನ್ನು ಹೊರಡಿಸಿದ್ದು, ಪ್ರವಾಸೋದ್ಯ ಇಲಾಖೆಯ ಆಯುಕ್ತರು ಏಕ ಕಡತದಲ್ಲಿ ದಿನಾಂಕ 07–11–2024ರಲ್ಲಿ ಕರ್ನಾಟಕ ಪ್ರವಾಸೋದ್ಯಮ ನೀತಿ 2024–29ಕ್ಕೆ ಅನುಮೋದನೆ ನೀಡಲಾಗಿರುತ್ತದೆ. ಹೀಗಾಗಿ ಹಿಂದಿನ ನೀತಿಗೆ ಸಂಬಂಧಿಸದೆ ಇರುವ ಎಲ್ಲಾ ಸರ್ಕಾರದ ಆದೇಶಗಳು ಅನೂರ್ಜಿತವಾಗಿರುತ್ತದೆ ಎಂಬುದಾಗಿ ತಿಳಿಸಿದ್ದಾರೆ.

# ಕುದುರೆಮುಖ ಟೌನ್‌ಶಿಪ್ ಸಹಿತ 282 ಎಕರೆ ಜಾಗ ಅರಣ್ಯ ಇಲಾಖೆಗೆ!




ಚಿಕ್ಕಮಗಳೂರು: ಬಳ್ಳಾರಿ ಜಿಲ್ಲೆಯ ಸಂಡೂರು ತಾಲ್ಲೂಕಿನ ದೇವದಾರಿ ಕಬ್ಬಿಣದ ಅದಿರು ಗಣಿಯ ಅರಣ್ಯ ಗುತ್ತಿಗೆ ಒಪ್ಪಂದ ಕಾರ್ಯಗತಗೊಳಿಸಲು ಕುದುರೆಮುಖ ಕಬ್ಬಿಣದ ಅದಿರು ಕಂಪನಿ (ಕೆಐಒಸಿಎಲ್) ತನ್ನ ಒಡೆತನದಲ್ಲಿರುವ ಚಿಕ್ಕಮಗಳೂರು ಜಿಲ್ಲೆಯ ಕುದುರೆಮುಖ ಟೌನ್‌ಶಿಪ್ ಸಹಿತ 282 ಎಕರೆ ಜಾಗವನ್ನು ಅರಣ್ಯ ಇಲಾಖೆಗೆ ಒಪ್ಪಿಸಲು ಮುಂದಾಗಿದೆ. ಕುದುರೆಮುಖದಲ್ಲಿ 1977ರಲ್ಲಿ ಗಣಿಗಾರಿಕೆ ಆರಂಭವಾಗಿದ್ದು, ಅಲ್ಲಿ ಕೆಲಸ ಮಾಡುವ ಉದ್ಯೋಗಿಗಳು ಉಳಿದುಕೊಳ್ಳಲು ಕುದುರೆಮುಖ ಟೌನ್‌ಶಿಪ್ ನಿರ್ಮಾಣವಾಗಿತ್ತು. ಸು. 6,000ಕ್ಕೂ ಹೆಚ್ಚು ಉದ್ಯೋಗಿಗಳು ಹಾಗೂ ಅವರ ಕುಟುಂಬಗಳು ಇಲ್ಲಿ ನೆಲೆಸಿದ್ದವು.

# ಬೆಳೆ ಹಾನಿ ಸಮೀಕ್ಷೆ ಪೂರ್ಣಗೊಳಿಸಿ ಸರ್ಕಾರಕ್ಕೆ ಶೀಘ್ರ ಶಿಫಾರಸು



ಧಾರವಾಡ : ಅತಿವೃಷ್ಟಿಯಿಂದ ನಷ್ಟ ಅನುಭವಿಸಿದ ರೈತರಿಗೆ ಸರ್ಕಾರ ನಿಯಮಾನುಸಾರ ಪರಿಹಾರ ನೀಡುತ್ತದೆ. ಪರಿಹಾರ ಕಾರ್ಯಗಳಲ್ಲಿ ಯಾವುದೇ ಲೋಪದೋಷಗಳಾಗದಂತೆ ಅಧಿಕಾರಿಗಳು ಎಚ್ಚರ ವಹಿಸಬೇಕು. ಸಮೀಕ್ಷೆ ಶೀಘ್ರ ಪೂರ್ಣಗೊಳಿಸಿ ವರದಿ ಸಲ್ಲಿಸಬೇಕು ಎಂದು ಸಚಿವ ಸಂತೋಷ್ ಲಾಡ್ ಹೇಳಿದರು. ಬೆಳೆ ಪರಿಹಾರದ ಕುರಿತು ಕೃಷಿ, ಕಂದಾಯ, ತೋಟಗಾರಿಕೆ ಇಲಾಖೆಗಳ ಅಧಿಕಾರಿಗಳೊಂದಿಗೆ ಜಿಲ್ಲಾ ಮಟ್ಟದ ಸಭೆ ಜರುಗಿಸಿ ಮಾತನಾಡಿದರು. ಅತಿವೃಷ್ಟಿಯಿಂದ ಹಾನಿಗೊಳಗಾದ ಎಲ್ಲ ಕೃಷಿ ಮತ್ತು ತೋಟಗಾರಿಕೆ ಬೆಳೆಗಳ ನಿಖರ ಸಮೀಕ್ಷೆ ಕೈಗೊಳ್ಳಲು ಅಧಿಕಾರಿಗಳಿಗೆ ಕಟ್ಟುನಿಟ್ಟಿನ ಸೂಚನೆನೀಡಿದರು.

# ಜನೌಷಧಿ ಮಾದರಿಯಲ್ಲಿ ಕೀಟನಾಶಕ ಕೇಂದ್ರ: ವಿ. ಸೋಮಣ್ಣ



ಬೆಂಗಳೂರು : ಕೇಂದ್ರ ಸರ್ಕಾರ ಜನೌಷಧಿ ಕೇಂದ್ರಗಳ ಮೂಲಕ ಯಾವ ರೀತಿ ರಿಯಾಯತಿ ದರದಲ್ಲಿ ಔಷಧ ನೀಡುತ್ತಿದೆಯೋ ಅದೇ ರೀತಿ ರೈತರಿಗೆ ಅನುಕೂಲವಾಗುವ ನಿಟ್ಟಿನಲ್ಲಿ ಪ್ರತಿ ಜಿಲ್ಲೆಯಲ್ಲೂ ಕೀಟನಾಶಕ ಕೇಂದ್ರ (ಫೆಸ್ಟಿಸೈಡ್ ಸೆಂಟರ್) ಸ್ಥಾಪಿಸುವ ಚಿಂತನೆ ಇದೆ ಎಂದು ಕೇಂದ್ರ ಸಚಿವ ವಿ.ಸೋಮಣ್ಣ ಸ್ಪಷ್ಟಪಡಿಸಿದರು. ಜನೌಷಧಿ ಕೇಂದ್ರಗಳ ಮೂಲಕ ಕೇಂದ್ರ ಸರ್ಕಾರ ಕಡಿಮೆ ದರದಲ್ಲಿ ಔಷಧಿಗಳನ್ನು ನೀಡುತ್ತಿದೆ. ಅದೇ ರೀತಿ ಪ್ರತಿ ಜಿಲ್ಲಾ ಕೇಂದ್ರಗಳಲ್ಲಿ ಕೀಟನಾಶಕ ಕೇಂದ್ರಗಳನ್ನು ಸ್ಥಾಪಿಸಿ ರೈತರಿಗೆ ಕಡಿಮೆ ದರದಲ್ಲಿ ಉತ್ಪನ್ನಗಳನ್ನು ಒದಗಿಸುವ ಬಗ್ಗೆ ಚಿಂತನೆ ನಡೆಸಲಾಗುತ್ತಿದೆ ಎಂದು ವಿವರಿಸಿದರು.

# ಛತ್ತೀಸ್‌ಗಢದ ಸುಕ್ಮಾದಲ್ಲಿ ನಕ್ಸಲರು ಪೊಲೀಸರಿಗೆ ಶರಣು




ಸುಕ್ಮಾ: ಛತ್ತೀಸ್‌ಗಢದ ಸುಕ್ಮಾದಲ್ಲಿ ಒಟ್ಟಾರೆ 33 ಲಕ್ಷ ರೂಪಾಯಿ ಬಹುಮಾನ ಘೋಷಿಸಲಾಗಿದ್ದ 11 ಮಂದಿ ಸೇರಿದಂತೆ ಒಟ್ಟು 20 ನಕ್ಸಲರು ಪೊಲೀಸರಿಗೆ ಶರಣಾಗಿದ್ದಾರೆ. ಮಾವೋವಾದಿಗಳ ಅತ್ಯಂತ ಬಲಿಷ್ಠ ಮಿಲಿಟರಿ ರಚನೆ ಎಂದು ಪರಿಗಣಿಸಲಾದ ಪೀಪಲ್ಸ್ ಲಿಬರೇಶನ್ ಗೆರಿಲ್ಲಾ ಆರ್ಮಿ ಬೆಟಾಲಿಯನ್ ನಂ.1ರ ಹಾರ್ಡ್‌ಕೋರ್ ಕೇಡರ್ ಸೇರಿದಂತೆ 9 ಮಹಿಳೆಯರೂ ಇದ್ದಾರೆ ಎಂದು ಅಧಿಕಾರಿಗಳು ತಿಳಿಸಿದ್ದಾರೆ. ಮಾವೋವಾದಿ ಸಂಘಟನೆಯೊಂದಿಗೆ ಸಂಬಂಧ ಹೊಂದಿರುವ ಎಲ್ಲರೂ ಹಿಂಸಾಚಾರವನ್ನು ತ್ಯಜಿಸಬೇಕು. ನಿಮಗೆ ಭದ್ರತೆಯನ್ನು ಸರ್ಕಾರ ಖಾತ್ರಿಪಡಿಸಿಕೊಡಲಿದೆ ಎಂದು ಎಸ್‌ಪಿ ಹೇಳಿದರು.

# ಮನೋಜ್ ಜರಾಂಗೆ ಪಾಟೀಲ್ ಬೇಡಿಕೆಗೆ ಸರಕಾರ ಅಸ್ತು



ಮುಂಬೈ: ಮರಾಠ ಮೀಸಲಾತಿಗೆ ಒತ್ತಾಯಿಸಿ ಮುಂಬೈನಲ್ಲಿ ಉಪವಾಸ ಸತ್ಯಾಗ್ರಹ ನಡೆಸುತ್ತಿದ್ದ ಮನೋಜ್ ಜರಾಂಗೆ ಪಾಟೀಲ್ ಬೇಡಿಕೆಗೆ ಸರ್ಕಾರ ಒಪ್ಪಿಕೊಂಡ ಹಿನ್ನೆಲೆ ಅವರು ಉಪವಾಸ ಸತ್ಯಾಗ್ರಹವನ್ನು ಕೈಬಿಟ್ಟಿದ್ದು, ಚಿಕಿತ್ಸೆಗಾಗಿ ಛತ್ರಪತಿ ಸಂಭಾಜಿನಗರದ ಗ್ಯಾಲಕ್ಸಿ ಆಸ್ಪತ್ರೆಗೆ ಅವರನ್ನು ದಾಖಲಾಗಿದ್ದಾರೆ. ರಾಜ್ಯ ಸರ್ಕಾರ ಮಜೋಜ್ ಜರಾಂಗೆ ಪಾಟೀಲ್ ಅವರ ಬೇಡಿಕೆಗಳನ್ನು ಒಪ್ಪಿಕೊಂಡಿದ್ದರಿಂದ ಸಂತಸಗೊಂಡಿದ್ದು,. ನಗರದಲ್ಲಿ ಸಂಭ್ರಮವಿದೆ. ಸರ್ಕಾರದ ಈ ನಿರ್ಧಾರವನ್ನು ರಾಜ್ಯಾದ್ಯಂತ ಸ್ವಾಗತಿಸಲಾಗುತ್ತಿದೆ. ಈ ನಿರ್ಧಾರವು ಮರಾಠಾ ಸಮುದಾಯದ ವಿದ್ಯಾರ್ಥಿಗಳು ಮತ್ತು ಯುವಕರಿಗೆ ಸಮಾಧಾನ ತಂದಿದೆ.

# ಭಾರತದ ಸಣ್ಣ ಚಿಪ್ ಜಗತ್ತನ್ನೇ ಬದಲಿಸಲಿದೆ: ಪ್ರಧಾನಿ ಮೋದಿ




ನವದೆಹಲಿ: ಭಾರತದ ಮೇಲೆ ಅಮೆರಿಕ ವಿಧಿಸಿರುವ ವ್ಯಾಪಕ ಸುಂಕದಿಂದ 'ಆರ್ಥಿಕ ಸ್ವಾರ್ಥ' ಸೃಷ್ಟಿಸಿದ ಸವಾಲುಗಳ ಹೊರತಾಗಿಯೂ, ಭಾರತದ ಜಿಡಿಪಿ ಶೇಕಡಾ 7.8ರಷ್ಟು ಬೆಳವಣಿಗೆಯನ್ನು ಸಾಧಿಸಿದೆ ಎಂದು ಪ್ರಧಾನಿ ನರೇಂದ್ರ ಮೋದಿ ವಿಶ್ವಾಸದಿಂದ ನುಡಿದಿದ್ದಾರೆ. ಸೆಮಿಕಾನ್ ಇಂಡಿಯಾ 2025ರ ಉದ್ಘಾಟನಾ ಕಾರ್ಯಕ್ರಮದಲ್ಲಿ ಮಾತನಾಡಿದ ಮೋದಿ, ಕೆಲವೇ ದಿನಗಳ ಹಿಂದೆ, ಈ ವರ್ಷದ ಮೊದಲ ತ್ರೈಮಾಸಿಕದ ಜಿಡಿಪಿ ಸಂಖ್ಯೆಗಳು ಬಂದಿವೆ. ಮತ್ತೊಮ್ಮೆ, ಭಾರತವು ಪ್ರತಿ ನಿರೀಕ್ಷೆ ಮೌಲ್ಯಮಾಪನಕ್ಕಿಂತ ಉತ್ತಮವಾಗಿ ಕಾರ್ಯ ನಿರ್ವಹಿಸಿದೆ. ಆರ್ಥಿಕ ಸ್ವಾರ್ಥದಿಂದ ಸೃಷ್ಟಿಯಾದ ಹಲವು ಸವಾಲುಗಳಿವೆ ಎಂದರು.

# ವಾಣಿಜ್ಯ ಸಿಲಿಂಡರ್ ಬೆಲೆಯಲ್ಲಿ ಇಳಿಕೆ



ನವದೆಹಲಿ: ವಾಣಿಜ್ಯ ಬಳಕೆಗಾಗಿ ಇರುವ 19 ಕೆಜಿ ತೂಕದ ಲಿಕ್ವಿಫೈಡ್ ಪೆಟ್ರೋಲಿಯಂ ಗ್ಯಾಸ್ ಸಿಲಿಂಡರ್‌ಗಳ ಬೆಲೆ ತೈಲ ಮಾರುಕಟ್ಟೆ ಕಂಪನಿಗಳು 51.50ರೂ.ನಷ್ಟು ಇಳಿಸಿದೆ. ಇದು ಸೆ.1ರಿಂದಲೇ ಜಾರಿಗೆ ಬಂದಿದೆ. ಆದರೆ, 14.2 ಕೆಜಿ ತೂಕದ ಗೃಹ ಬಳಕೆಯ ಸಿಲಿಂಡರ್‌ಗಳ ಬೆಲೆಯಲ್ಲಿ ಯಾವುದೇ ಬದಲಾವಣೆಯಾಗಿಲ್ಲ. ಪ್ರಮುಖ ನಗರಗಳಲ್ಲಿನ ವಾಣಿಜ್ಯ ಸಿಲಿಂಡರ್‌ಗಳ ಹೊಸ ದರಗಳು ಹೀಗಿವೆ: ದೆಹಲಿಯಲ್ಲಿ19 ಕೆಜಿ ತೂಕದ ಸಿಲಿಂಡರ್‌ನ ಚಿಲ್ಲರೆ ಮಾರಾಟ ಬೆಲೆ ಮೊದಲು 1,631.50 ಇತ್ತು, ಈಗ 1,580 ರೂಗೆ ಇಳಿಕೆಯಾಗಿದೆ.

# ವಲಸಿಗರ ವಿರುದ್ದದ ಕಾರ್ಯಾಚರಣೆ ನಡೆಯುತ್ತಿರುತ್ತದೆ : ಹಿಮಂತ ಬಿಸ್ವಾ ಶರ್ಮಾ



ಅಸ್ಸೋಂ : ಗಡಿಯಲ್ಲಿ ವಲಸಿಗರ ವಿರುದ್ಧದ ಕಾರ್ಯಾಚರಣೆ ಮುಂದುವರೆದಿದೆ. ನಿನ್ನೆ ಸುಮಾರು 26 ವಲಸಿಗರನ್ನು ಬಾಂಗ್ಲಾದೇಶಕ್ಕೆ ಗಡೀಪಾರು ಮಾಡಲಾಗಿದೆ ಎಂದು ಅಸ್ಸೋಂ ಮುಖ್ಯಮಂತ್ರಿ ಹಿಮಂತ ಬಿಸ್ವಾ ಶರ್ಮಾ ಹೇಳಿದ್ದಾರೆ. ದಿಸ್ಪುರದ ಲೋಕಸೇವಾ ಭವನದಲ್ಲಿ ಮಾತನಾಡಿದ ಅವರು,"ಗಡಿಯಲ್ಲಿ ನಿರಂತರ ಒತ್ತಡವಿದೆ. ವಲಸಿಗರ ವಾಪಸಾತಿ ಎರಡು ರೀತಿಯಲ್ಲಿ ನಡೆಯುತ್ತಿದೆ. ಒಂದು ಗಡಿಯನ್ನು ಪ್ರವೇಶಿಸಿದ ತಕ್ಷಣ ವಾಪಸ್ ಕಳುಹಿಸುವುದು. ಇನ್ನೊಂದು 1971ರ ನಂತರ ಬಂದವರನ್ನು ಗುರುತಿಸಿ ವಾಪಸ್ ಕಳುಹಿಸುವುದು.



ಕರಾವಳಿ ತರಂಗಿಣಿ

# ಕಲಾ ತರಂಗಿಣಿ



## ಸೆನ್ಸಾರ್ ಮಂಡಳಿ ನಿರ್ಲಕ್ಷ್ಯ ರವಿ ಶ್ರೀವತ್ಸ ಬೇಸರ

ಡೆಡ್ಲಿ ಸೋಮ, ಮಾದೇಶ ಖ್ಯಾತಿಯ ರವಿ ಶ್ರೀವತ್ಸ ಅವರ ನಿರ್ಮಾಣ ಹಾಗೂ ನಿರ್ದೇಶನದ 'ಗ್ಯಾಂಗ್ಸ್ ಆಫ್ ಯುಕೆ' ಚಿತ್ರದ ಹಾಡು ಹಾಗೂ ಟ್ರೈಲರ್ ಬಿಡುಗಡೆ ಕಾರ್ಯಕ್ರಮ ಕಲಾವಿದರ ಸಂಘದ ಆವರಣದಲ್ಲಿ ನೆರವೇರಿತು. ರಿಯಲ್ ಸ್ಟಾರ್ ಉಪೇಂದ್ರ ಅವರು ಟ್ರೈಲರ್‌ಗೆ ಚಾಲನೆ ನೀಡಿ ಶುಭ ಕೋರಿದರು. ಈ ಸಂದರ್ಭದಲ್ಲಿ ನಿರ್ಮಾಪಕ ಕೆ. ಮಂಜು, ಉಮೇಶ್ ಬಣಕಾರ್, ನ್ಯಾಯವಾದಿ ಟಿ.ಪ್ರಸನ್ನಕುಮಾರ್, ರಾಧಾಕೃಷ್ಣ ಅಡಿಗ, ಪ್ರವೀಣ್, ಉದಯ್, ಸೇತು ಮುಕುಂದನ್, ಥ್ರಿಲ್ಲರ್ ಮಂಜು ಹಾಗೂ ರವಿ ಶ್ರೀವತ್ಸ ಅವರ ಹಿತೈಶಿಗಳು ಹಾಗೂ ಸ್ನೇಹಿತರನೇಕರು ಹಾಜರಿದ್ದರು. ತಮ್ಮ ಡೆಡ್ಲಿ ಆರ್ಟ್ಸ್ ಬ್ಯಾನರ್ ಮೂಲಕ 'ಗ್ಯಾಂಗ್ಸ್ ಆಫ್ ಯುಕೆ' ಚಿತ್ರವನ್ನು ರವಿ ಶ್ರೀವತ್ಸ ಅವರೇ ನಿರ್ಮಿಸಿದ್ದಾರೆ. ಬಾಗಲಕೋಟೆಯ ಪಿಲ್ಲಾರಿ ಫಾಲ್ಸ್‌ನಲ್ಲಿ ನಡೆದ ನೈಜ ಘಟನೆ ಇಟ್ಟುಕೊಂಡು ರವಿ ಶ್ರೀವತ್ಸ ಅವರು ಕಥೆಗಾರ ಎಂ.ಎಸ್. ರಮೇಶ್ ಜತೆಗೂಡಿ ಈ ರಾ ಸಬ್ಜೆಕ್ಟ್‌ಗೆ ಚಿತ್ರಕಥೆ, ಸಂಭಾಷಣೆ ಹೆಣೆದಿದ್ದಾರೆ. ಈ ಸಂದರ್ಭದಲ್ಲಿ ಚಿತ್ರವನ್ನು ರಿಲೀಸ್ ಹಂತದವರೆಗೆ ತರುವಾಗ ಎದುರಿಸಿದ ಸಂಕಷ್ಟಗಳನ್ನು ವಿವರಿಸಿದರು. ಪ್ರಾದೇಶಿಕ ಸೆನ್ಸಾರ್ ಮಂಡಳಿ ವೈಲೆನ್ಸ್ ಆಗಿದೆ ಎಂಬ ಕಾರಣ ನೀಡಿ, ನಮ್ಮ ಚಿತ್ರವನ್ನು ಬ್ಯಾನ್ ಮಾಡಿದ್ದಲ್ಲದೆ, ಆರ್.ಸಿ.ಗೆ ಹೋಗಿ ಸೆನ್ಸಾರ್ ಮಾಡಿಸಿಕೊಳ್ಳಿ ಎಂದರು. ಅಲ್ಲದೆ ನಾವು ಕಷ್ಟಪಟ್ಟು ನಿರ್ಮಿಸಿದ ಸಿನಿಮಾನ ಸೆನ್ಸಾರ್ ಅಧಿಕಾರಿಗಳು ಪೂರ್ತಿ ವೀಕ್ಷಿಸದೆ ಬೇಜವಾಬ್ದಾರಿತನ ತೋರಿಸಿದರು. ನಂತರ ರಿವೈಸಿಂಗ್ ಕಮಿಟಿಗೆ ಹೋಗಿ ಚಿತ್ರವನ್ನು ಸೆನ್ಸಾರ್ ಮಾಡಿಸಿಕೊಂಡಿದ್ದಾಗಿ ಬೇಸರದಿಂದಲೇ ವಿವರಿಸಿದರು. ರಕ್ತ ತನ್ನ ಕುರುಹನ್ನು ಬಿಟ್ಟು ಹೋಗುತ್ತೆ, ಜಿದ್ದು ಒಬ್ಬರಿಂದ ಒಬ್ಬರಿಗೆ ಟ್ರಾವೆಲ್ ಆಗುತ್ತೆ ಅನ್ನೋ ಕಾನ್ಸೆಪ್ಟ್ ಇಟ್ಟುಕೊಂಡು ರವಿ ಶ್ರೀವತ್ಸ ಈ ಚಿತ್ರವನ್ನು ನಿರೂಪಿಸಿದ್ದಾರೆ. ಭೀಮೆಯ ಮಡಿಲಲ್ಲಿ ಎಂಬ ಟ್ಯಾಗ್‌ಲೈನ್ ಈ ಚಿತ್ರಕ್ಕಿದ್ದು ಸದ್ಯದಲ್ಲೇ ರಿಲೀಸ್ ಮಾಡೋ ಸಿದ್ದತೆ ಮಾಡಿಕೊಂಡಿದ್ದಾರೆ ನಿರ್ದೇಶಕ ರವಿ ಶ್ರೀವತ್ಸ.



## ಯುವರಿಂದ 'ಅರಸಯ್ಯನ ಪ್ರೇಮ ಪ್ರಸಂಗ' ಟ್ರೇಲರ್

ಮೇಘಶ್ರೀ ರಾಜೇಶ್ ನಿರ್ಮಾಣದ, ಜೆ.ವಿ.ಆರ್ ದೀಪು ನಿರ್ದೇಶನದ ಹಾಗೂ "ಫ್ರೆಂಚ್ ಬಿರಿಯಾನಿ" ಖ್ಯಾತಿಯ ಮಹಾಂತೇಶ್ ಹಿರೇಮಠ ನಾಯಕನಾಗಿ ನಟಿಸಿರುವ ಗ್ರಾಮೀಣ ಸೊಗಡಿನ ಕಾಮಿಡಿ ಕಥಾಹಂದರ ಹೊಂದಿರುವ "ಅರಸಯ್ಯನ ಪ್ರೇಮ ಪ್ರಸಂಗ" ಚಿತ್ರದ ಟ್ರೇಲರ್ ಇತ್ತೀಚೆಗೆ ಬಿಡುಗಡೆಯಾಯಿತು. ಯುವ ರಾಜಕುಮಾರ್ ಈ ಚಿತ್ರದ ಟ್ರೇಲರ್ ಬಿಡುಗಡೆ ಮಾಡಿ ಚಿತ್ರತಂಡಕ್ಕೆ ಶುಭ ಕೋರಿದರು. ಮಸಾಲ ಜಯರಾಮ್, ಸುಬ್ರಹ್ಮಣ್ಯ, ರೂಪಾಲಿ, ನಿರ್ಮಾಪಕರಾದ ನವರಸನ್, ರಮೇಶ್, ಸುರೇಶ್, ನಟ ಕಾರುಣ್ಯ ರಾಮ್ ಹಾಗೂ ನಿರ್ದೇಶಕರಾದ ಗುರು ದೇಶಪಾಂಡೆ, ಜಡೇಶ್ ಕೆ. ಹಂಪಿ, ಎಸ್ ಗೋವಿಂದ್, ಸುಕೇಶ್ ಶೆಟ್ಟಿ, ದೇವನೂರು ಚಂದ್ರು, ಜಾಕಿ ಮಂತಾದ ಗಣ್ಯರು ಟ್ರೇಲರ್ ಬಿಡುಗಡೆ ಸಮಾರಂಭಕ್ಕೆ ಆಗಮಿಸಿ ತಮ್ಮ ಪ್ರೋತ್ಸಾಹದ ನುಡಿಗಳ ಮೂಲಕ ಚಿತ್ರಕ್ಕೆ ಶುಭ ಕೋರಿದರು. ನಂತರ ಚಿತ್ರತಂಡದ ಸದಸ್ಯರು ಮಾತನಾಡಿದರು. ನಮ್ಮ ಚಿತ್ರದ ಟ್ರೇಲರ್ ಬಿಡುಗಡೆ ಮಾಡಿಕೊಟ್ಟ ಯುವ ರಾಜಕುಮಾರ್ ಅವರಿಗೆ ಹಾಗೂ ಸಮಾರಂಭಕ್ಕೆ ಆಗಮಿಸಿರುವ ಪ್ರತಿಯೊಬ್ಬ ಗಣ್ಯರಿಗೂ ಧನ್ಯವಾದ. ನನಗೆ ದೊಡ್ಮನೆಯವರಿಂದ ಟ್ರೇಲರ್ ಅನಾವರಣ ಮಾಡಿಸುವ ಆಸೆಯಿತ್ತು. ನಮ್ಮ ಚಿತ್ರದ ಶೀರ್ಷಿಕೆಯನ್ನು ರಾಘವೇಂದ್ರ ರಾಜಕುಮಾರ್ ಅವರು ಬಿಡುಗಡೆ ಮಾಡಿಕೊಟ್ಟಿದ್ದರು. ಇಂದು ಯುವ ರಾಜಕುಮಾರ್ ಟ್ರೇಲರ್ ಅನಾವರಣ ಮಾಡಿದ್ದು ಬಹಳ ಖುಷಿಯಾಗಿದೆ. ಇಡೀ ಚಿತ್ರತಂಡದ ಶ್ರಮದಿಂದ ಒಂದೊಳ್ಳೆ ಮನೋರಂಜನೆಯ ಚಿತ್ರ ಇದೇ ಸೆಪ್ಟೆಂಬರ್ 19ರಂದು ನಿಮ್ಮ ಮುಂದೆ ಬರಲಿದೆ ಎಂದು ನಿರ್ಮಾಪಕ ರಾಜೇಶ್ ಗೌಡ ತಿಳಿಸಿದರು. ನಾನು ಲೂಸಿಯಾ ಪವನ್ ಕುಮಾರ್ ಅವರ ಬಳಿ ಕೆಲಸ ಮಾಡಿದ್ದೆ. ನಿರ್ದೇಶಕನಾಗಿ ಇದು ಮೊದಲ ಚಿತ್ರ. ಟೀಸರ್ ಹಾಗೂ ಹಾಡುಗಳ ಮೂಲಕ ಜನರ ಮನಸ್ಸಿಗೆ ಹತ್ತಿರವಾಗಿರುವ ನಮ್ಮ ಚಿತ್ರದ ಟ್ರೇಲರ್ ಇಂದು ಬಿಡುಗಡೆಯಾಗಿದೆ. ಚಿತ್ರ ಸೆಪ್ಟೆಂಬರ್ 19ರಂದು ತೆರೆಗೆ ಬರಲಿದೆ ಎಂದರು ನಿರ್ದೇಶಕ ಜೆ.ವಿ.ಆರ್ ದೀಪು. ನಾನು ಜನರಿಗೆ ಪರಿಚಯವಾಗಿದ್ದೆ ಪುನೀತ್ ರಾಜಕುಮಾರ್ ಅವರ ನಿರ್ಮಾಣದ 'ಫ್ರೆಂಚ್ ಬಿರಿಯಾನಿ' ಚಿತ್ರದ ಮೂಲಕ. ಇಂದು ಪುನೀತ್ ಅವರ ಕುಟುಂಬದ ಯುವ ರಾಜಕುಮಾರ್ ನಾನು ನಟಿಸಿರುವ ಈ ಚಿತ್ರದ ಟ್ರೇಲರ್ ಅನಾವರಣ ಮಾಡಿದ್ದು ಸಂತೋಷವಾಗಿದೆ ಎಂದರು.



## ಮಿರಾಯ್ ಪ್ರಚಾರ ಮಾಡಿದ ತೇಜ ಸಜ್ಜಾ

'ಹನುಮಾನ್' ಸಿನಿಮಾ ಬಳಿಕ ತೇಜ ಸಜ್ಜಾ ನಟಿಸಿದ 'ಮಿರಾಯ್' ಚಿತ್ರ ಬಹಳ ನಿರೀಕ್ಷೆ ಹೆಚ್ಚಿಸಿದೆ. ಈ ಚಿತ್ರದ ಮೂಲಕ ತೇಜ ಸಜ್ಜಾ ಮತ್ತೊಮ್ಮೆ ಸೂಪರ್ ಯೋಧನಾಗಿ ನಟಿಸಿದ್ದು, ಅವರನ್ನು ಹೊಸ ಅವತಾರದಲ್ಲಿ ನೋಡುವುದಕ್ಕೆ ಪ್ರೇಕ್ಷಕರು ಕೂಡ ತುದಿಗಾಲಲ್ಲಿ ನಿಂತಿದ್ದಾರೆ. ಬಹುಭಾಷೆಯಲ್ಲಿಯೇ ಮೂಡಿಬಂದಿರುವ ಈ ಚಿತ್ರದ ಟ್ರೇಲರ್‌ಗೆ ಸಖತ್ ರೆಸ್ಪಾನ್ಸ್ ಸಿಕ್ಕಿದೆ. ಇದೇ ತಿಂಗಳ 12ರಂದು ಮಿರಾಯ್ ತೆರೆಗೆ ಬರ್ತಿದ್ದು, ಪ್ರಚಾರ ಕಾರ್ಯಭರದಿಂದ ಸಾಗಿದೆ. ಇಂದು ಬೆಂಗಳೂರಿನಲ್ಲಿ ತೇಜ ಸಜ್ಜಾ ತಮ್ಮ ಚಿತ್ರ ಪ್ರಚಾರ ನಡೆಸಿದರು. ಬೆಂಗಳೂರಿನ ಖಾಸಗಿ ಹೋಟೆಲ್‌ನಲ್ಲಿ ಮಿರಾಯ್ ಸುದ್ದಿ ಗೋಷ್ಠಿ ನಡೆಯಿತು. ಮಿರಾಯ್ ದೊಡ್ಡ ಸಿನಿಮಾ. ಇಡೀ ತಂಡ ಸಾಕಷ್ಟು ಪರಿಶ್ರಮ ಹಾಕಿ ಕೆಲಸ ಮಾಡಿದೆ. ನಿಮ್ಮ ಎಲ್ಲಾ ಬೆಂಬಲ ಈ ಚಿತ್ರದ ಮೇಲೆ ಇರಲಿ ಎಂದು ಕನ್ನಡದಲ್ಲಿಯೇ ಮಾತು ಆರಂಭಿಸಿದ ನಾಯಕ ತೇಜ ಸಜ್ಜಾ, ನಾನು ಇನ್ನೂ ಕನ್ನಡ ಕಲಿಯುತ್ತಿದ್ದೇನೆ. ತಪ್ಪಿದ್ದರೆ ಕ್ಷಮಿಸಿ. ಮಿರಾಯಿ, ಫ್ಯಾಂಟಸಿ ಆಕ್ಷನ್ ಥ್ರಿಲ್ಲರ್ ಸಿನಿಮಾ. ಚಿಕ್ಕವರಿಂದ ಹಿಡಿದು ದೊಡ್ಡವರಿಗೂ ಈ ಚಿತ್ರ ಇಷ್ಟವಾಗುತ್ತದೆ. ಆಕ್ಷನ್, ಎಮೋಷನ್ ಜೊತೆಗೆ ಇತಿಹಾಸದ ಕಥೆಯನ್ನು ಮಿರಾಯ್‌ನಲ್ಲಿ ಕಟ್ಟಿಕೊಡಲಾಗಿದೆ. ಪ್ರತಿಯೊಬ್ಬರೂ ಥಿಯೇಟರ್‌ನಲ್ಲಿ ಸಿನಿಮಾ ನೋಡಿ ಮನವಿ ಮಾಡಿದರು. ತೇಜ ಸಜ್ಜಾ ಸೂಪರ್ ಯೋಧನಾಗಿ ಜನರನ್ನು ರಕ್ಷಿಸಲು ಹೋರಾಡು ಪಾತ್ರದಲ್ಲಿ ಕಾಣಿಸಿಕೊಳ್ಳಲಿದ್ದಾರೆ. ತೇಜ ಸಜ್ಜಾ ವಿರುದ್ಧ ಟಾಲಿವುಡ್ ನಟ ಮಂಚು ಮನೋಜ್ ಖಳನಾಯಕನಾಗಿ ಅಬ್ಬರಿಸಿದ್ದಾರೆ. ತೇಜ್ ಸಜ್ಜಾ ಜೊತೆ ರಿತಿಕಾ ನಾಯಕ್ ನಾಯಕಿಯಾಗಿ ಗಮನ ಸೆಳೆದಿದ್ದಾರೆ. ನಿರ್ದೇಶಕ ಕಾರ್ತಿಕ್ ಘಟ್ಟಮನೇನಿ 'ಮಿರಾಯ್'ಗೆ ಕಥೆಯ ಜೊತೆಗೆ ಚಿತ್ರಕಥೆಯನ್ನೂ ಬರೆದು ನಿರ್ದೇಶನ ಮಾಡಿದ್ದಾರೆ.



## ಗಡಿನಾಡ ಪ್ರೇಮಕಥೆ ಏಳುಮಲೆ ಟ್ರೇಲರ್ ಅನಾವರಣ

ಕರ್ನಾಟಕ – ತಮಿಳುನಾಡು ಗಡಿಭಾಗದ ಪ್ರೇಮಕಥೆ ಏಳುಮಲೆ ಸಿನಿಮಾದ ಟ್ರೇಲರ್ ರಿಲೀಸ್ ಆಗಿದೆ. ಬೆಂಗಳೂರಿನ ಜಿಟಿ ಮಾಲ್‌ನಲ್ಲಿ ಪ್ರೇಕ್ಷಕರ ಸಮ್ಮುಖದಲ್ಲಿ ಟ್ರೇಲರ್ ರಿಲೀಸ್ ಮಾಡಲಾಯಿತು. ಕಾರ್ಯಕ್ರಮಕ್ಕೆ ನಟರಾದ ಡಾಲಿ ಧನಂಜಯ್, ನವೀನ್ ಶಂಕರ್ ಹಾಗೂ ಶರಣ್ ವಿಶೇಷ ಮೆರುಗು ನೀಡಿದರು. ಟ್ರೇಲರ್ ಬಿಡುಗಡೆ ಬಳಿಕ ನಟ ಶರಣ್ ಮಾತನಾಡಿ, ಕನ್ನಡದ ಇವೆಂಟ್ ಇಷ್ಟು ಜನರ ಮುಂದೆ ನಡೆಯುತ್ತಿದೆ ಎನ್ನುವುದು ಈ ಚಿತ್ರದ ನಿಜವಾದ ಗೆಲುವು ಇಲ್ಲಿಂದ ಶುರುವಾಗಿದೆ. ಈ ಚಿತ್ರದ ರಿಯಲ್ ಹೀರೋ ತರುಣ್. ಅವರು ಒಂದು ಸಿನಿಮಾದ ಆಯ್ಕೆ ಹೇಗಿದೆ ಅನ್ನೋದಕ್ಕೆ ನನ್ನ ಜರ್ನಿ ಸಾಕ್ಷಿ. ಅವರು ನನ್ನ ಸಿನಿಮಾಗಳ ಕಥೆ ಆಯ್ಕೆ ಮಾಡುತ್ತಾರೆ. ಏಳುಮಲೆ ಟ್ರೇಲರ್ ನೋಡಿದರೆ ಸಿನಿಮಾ ನೋಡ್ಲೇಬೇಕು ಎನಿಸುತ್ತದೆ. ಇದು ಕಂಟೆಂಟ್ ಸಿನಿಮಾ. ಈ ಚಿತ್ರ ದೊಡ್ಡ ಹಿಟ್ ಆಗಲಿದೆ ಎಂಬ ನಂಬಿಕೆ ಇದೆ ಎಂದರು. ನಟ ಡಾಲಿ ಧನಂಜಯ್ ಮಾತನಾಡಿ, ಏಳುಮಲೆ ಟೀಸರ್ ನೋಡಿದಾಗಿನಿಂದಲೂ ಬಹಳ ಖುಷಿ ಇದೆ. ತರುಣ್, ರಾಣಾಗೆ ಮೆಸೇಜ್ ಮಾಡಿ ಬಹಳ ಎನರ್ಜಿ ಇದೆ ಎಂದಿದ್ದೆ. ತುಂಬಾ ದಿನ ಆಯ್ತು ಈ ರೀತಿ ಲವ್ ಸ್ಟೋರಿ ನೋಡದೆ. ಸಿನಿಮಾವನ್ನು ತುಂಬಾ ಫ್ಯಾಷನೇಟೆಡ್ ಆಗಿ ಮಾಡಿದ ಯಾವ ಪ್ರಯತ್ನ ಕೂಡ ಇಲ್ಲಿವರೆಗೂ ಸೋತಿಲ್ಲ. ಈ ತಂಡದಲ್ಲಿ ಪ್ರಾಮಾಣಿಕತೆ ಎದ್ದು ಕಾಣಿಸುತ್ತಿದೆ. ಆ ಪ್ರಾಮಾಣಿಕತೆಯೇ ಈ ಸಿನಿಮಾ ಗೆಲ್ಲಿಸುತ್ತದೆ ಎಂಬ ನಂಬಿಕೆ ಇದೆ. ನಂದು ತರುಣ್ ಅವರದ್ದು ಬ್ರದರ್ಸ್ ಸಂಬಂಧ ಎಂದರು.



## 'ಮಹಾನ್' ಚಿತ್ರದಲ್ಲಿ 'ಬಿಗ್ ಬಾಸ್' ನಟಿ

"ನಾಗಿಣಿ" ಧಾರಾವಾಹಿಯ ಮೂಲಕ ನಾಡಿನ ಜನರ ಮನ ಗೆದ್ದ "ಬಿಗ್ ಬಾಸ್" ಖ್ಯಾತಿಯ ನಟಿ ನಮ್ರತಾ ಗೌಡ ಹೆಸರಾಂತ ನಿರ್ದೇಶಕ ಪಿ.ಸಿ.ಶೇಖರ್ ನಿರ್ದೇಶನದ, ಪ್ರತಿಷ್ಠಿತ ಸಂಸ್ಥೆಯ ಸಹಯೋಗದೊಂದಿಗೆ ಆಕಾಶ್ ಪಿಕ್ಚರ್ಸ್ ಲಾಂಛನದಲ್ಲಿ ಪ್ರಕಾಶ್ ಬುದ್ದೂರು ಅವರು ನಿರ್ಮಿಸುತ್ತಿರುವ ಹಾಗೂ ತಮ್ಮ ಅಮೋಘ ಅಭಿನಯದ ಮೂಲಕ ಜನಪ್ರಿಯರಾಗಿರುವ ವಿಜಯ ರಾಘವೇಂದ್ರ ನಾಯಕರಾಗಿ ನಟಿಸುತ್ತಿರುವ "ಮಹಾನ್" ಚಿತ್ರದ ಪ್ರಮುಖಪಾತ್ರದಲ್ಲಿ ಅಭಿನಯಿಸುತ್ತಿದ್ದಾರೆ. ಈ ಚಿತ್ರದ ಕುರಿತು ನಟ ನಮ್ರತಾ ಗೌಡ ಈ ರೀತಿ ಹೇಳುತ್ತಾರೆ. ನಾನು ಸಿನಿಮಾದಲ್ಲಿ ನಟಿಸುವಂತೆ ಅನೇಕ ಸ್ನೇಹಿತರು ಬಹಳ ದಿನಗಳಿಂದ ಒತ್ತಾಯಿಸುತ್ತಿದ್ದರು. ನಾನು ಒಳ್ಳೆಯ ಕಥೆಗಾಗಿ ಕಾಯುತ್ತಿದ್ದೆ. ನಿರ್ದೇಶಕ ಪಿ.ಸಿ.ಶೇಖರ್ ಅವರು "ಮಹಾನ್" ಚಿತ್ರದ ಕಥೆ ಹೇಳಿದಾಗ, ಕಥೆ ಮನಸ್ಸಿಗೆ ಹತ್ತಿರವಾಯಿತು. ಕಥೆ ಕೇಳಿದ ತಕ್ಷಣ ನಟಿಸಲು ಒಪ್ಪಿಕೊಂಡೆ. ರೈತರ ಬದುಕು ಬವಣೆಗಳ ಸುತ್ತ ಹೆಣೆದಿರುವ ಕಥಾಹಂದರ ಹೊಂದಿರುವ ಈ ಚಿತ್ರದಲ್ಲಿ ನಟಿಸಲು ಬಹಳ ಸಂತೋಷವಾಗಿದೆ. ಪ್ರಕಾಶ್ ಬುದ್ದೂರು ಅವರು ಯಾವುದೇ ಕೊರತೆ ಬಾರದ ಹಾಗೆ ಈ ಚಿತ್ರ ನಿರ್ಮಾಣ ಮಾಡುತ್ತಿದ್ದಾರೆ.




## ಈ ವಾರ ತೆರೆ ಮೇಲೆ ನಾನು ಮತ್ತು ಗುಂಡ 2

ಈ ಹಿಂದೆ ತೆರೆಕಂಡ ನಾನು ಮತ್ತು ಗುಂಡ ಭಾವನಾತ್ಮಕವಾಗಿ ಪ್ರೇಕ್ಷಕರನ್ನು ಸೆಳೆದಿತ್ತು. ಇದೀಗ ಆ ಚಿತ್ರದ ಮುಂದುವರೆದ ಭಾಗವಾಗಿ ನಾನು ಮತ್ತು ಗುಂಡ–2 ತಯಾರಾಗಿದ್ದು. 'ಈ ಶುಕ್ರವಾರ (ಸೆ.5) ರಾಜ್ಯಾದ್ಯಂತ ತೆರೆ ಕಾಣುತ್ತಿದೆ. ಹಿಂದಿನ ಚಿತ್ರಕ್ಕೆ ಆಕ್ಷನ್ ಕಟ್ ಹೇಳಿದ್ದ ರಘುಹಾಸನ್ ಅವರೇ ಈ ಚಿತ್ರದ ಕಥೆ, ಚಿತ್ರಕಥೆ ಬರೆದು ನಿರ್ದೇಶಿಸಿದ್ದು, ನಿರ್ಮಾಣದ ಜವಾಬ್ದಾರಿಯನ್ನು ಸಹ ಹೊತ್ತಿದ್ದಾರೆ. ಈ ಚಿತ್ರದಲ್ಲಿ ರಾಕೇಶ್ ಅಡಿಗ, ರಚನಾ ಇಂದರ್ ನಾಯಕ ನಾಯಕಿಯಾಗ ನಟಿಸಿದ್ದಾರೆ. ಆರ್‌ಪಿ. ಪಟ್ನಾಯಕ್ ಅವರ ಸಂಗೀತ ಸಂಯೋಜನೆಯಲ್ಲಿ ಮೂಡಿಬಂದುರುವ ಈ ಚಿತ್ರದ ಹಾಡುಗಳು ಈಗಾಗಲೇ ಪ್ರೇಕ್ಷಕರ ಮನ ಗೆದ್ದಿವೆ. ಸೆನ್ಸಾರ್ ಮಂಡಳಿ ಚಿತ್ರಕ್ಕೆ ಯಾವುದೇ ಕಟ್ ಸೂಚಿಸದೆ 'ಯು/ಎ' ಕೊಟ್ಟಿದೆ, ಶಂಕರ ನಿಧನನಾದ ಮೇಲೆ ಆತನ ಮಗನಿಂದ ಕಥೆ ಕಂಟಿನ್ಯೂ ಆಗುತ್ತದೆ. ರಾಕೇಶ್ ಅಡಿಗ ಶಂಕರನ ಮಗನಾಗಿ ನಟಿಸಿದ್ದು, ಆತನಿಗೆ ನಾಯಿಯೇ ಪ್ರಪಂಚ. ಸೋಷಿಯಲ್ ಕನ್‌ಸರ್ನ್ ಜೊತೆಗೆ ಡಿವೈನ್ ಕಂಟೆಂಟ್ ಕೂಡ ಚಿತ್ರದಲ್ಲಿದೆ. ಊಟಿ, ಶಿವಮೊಗ್ಗ, ತೀರ್ಥಹಳ್ಳಿ, ಬಾಳೆಹೊನ್ನೂರು, ಬೆಂಗಳುರು ಸುತ್ತಮುತ್ತ ಚಿತ್ರೀಕರಣ ನಡೆಸಲಾಗಿದೆ.



## 'ಲ್ಯಾಂಡ್ ಲಾರ್ಡ್'ನಲ್ಲಿ ಪೊಲೀಸಾಗಿ ಮಿಂಚಿದ ರಿತನ್ಯಾ ವಿಜಯ್

ಚಾಲೆಂಜಿಂಗ್ ಸ್ಟಾರ್ ದರ್ಶನ್ ನಾಯಕರಾಗಿ ನಟಿಸಿದ್ದ ಸೂಪರ್ ಹಿಟ್ 'ಸಾರಥಿ' ಚಿತ್ರವನ್ನು ನಿರ್ಮಿಸಿದ್ದ ಕೆ.ವಿ.ಸತ್ಯಪ್ರಕಾಶ್ ಹಾಗೂ ಹೇಮಂತ್ ಗೌಡ.ಕೆ.ಎಸ್ ಅವರು 'ಸಾರಥಿ ಫಿಲಂಸ್' ಮೂಲಕ ನಿರ್ಮಾಣ ಮಾಡುತ್ತಿರುವ, 'ಗುರುಶಿಷ್ಯರು' ಚಿತ್ರದ ನಿರ್ದೇಶಕ ಹಾಗೂ "ಕಾಟೇರ" ಚಿತ್ರದ ಕಥಾ ಲೇಖಕ ಜಡೇಶ್ ಕೆ ಹಂಪಿ ನಿರ್ದೇಶನದ ಹಾಗೂ ತಮ್ಮ ಅಮೋಘ ಅಭಿನಯದ ಮೂಲಕ ಅಭಿಮಾನಿಗಳ ಮನ ಗೆದ್ದಿರುವ ದುನಿಯಾ ವಿಜಯ್, ರಚಿತಾ ರಾಮ್ ಪ್ರಮುಖಪಾತ್ರದಲ್ಲಿ ನಟಿಸುತ್ತಿರುವ "ಲ್ಯಾಂಡ್ ಲಾರ್ಡ್" ಚಿತ್ರದಲ್ಲಿ ದುನಿಯಾ ವಿಜಯ್ ಪುತ್ರಿ ರಿತನ್ಯಾ ವಿಜಯ್ ಸಹ ಮುಖ್ಯಪಾತ್ರದಲ್ಲಿ ಅಭಿನಯಿಸಿದ್ದಾರೆ. ಆಗಸ್ಟ್ 30 ರಿತನ್ಯ ಅವರ ಜನ್ಮದಿನ. ಅಂದು ರಿತನ್ಯಾ ಅವರ ಫಸ್ಟ್ ಲುಕ್ ಬಿಡುಗಡೆ ಮಾಡುವ ಮೂಲಕ "ಲ್ಯಾಂಡ್ ಲಾರ್ಡ್" ಚಿತ್ರತಂಡ ಹುಟ್ಟುಹಬ್ಬದ ಶುಭಾಶಯ ತಿಳಿಸಿದೆ. ರಿತನ್ಯಾ ವಿಜಯ್ ಅವರು ಭಾಗ್ಯ ಎನ್ನುವ ಪಾತ್ರದಲ್ಲಿ ಕಾಣಿಸಿಕೊಳ್ಳುತ್ತಿದ್ದಾರೆ. "ಲ್ಯಾಂಡ್ ಲಾರ್ಡ್" ಚಿತ್ರದ ರಿತನ್ಯ ವಿಜಯ್ ಅವರ ಫಸ್ಟ್ ಲುಕ್ ಪೋಸ್ಟರ್‌ಗೆ ಮೆಚ್ಚುಗೆಯ ಮಹಾಪೂರವೇ ಹರಿದು ಬರುತ್ತಿದೆ.



## ಈ ವಾರ ತೆರೆಗೆ '31 ಡೇಸ್'



ಇದು ವಿ.ಮನೋಹರ್ ಸಂಗೀತ ಸಂಯೋಜನೆಯ 150ನೇ ಚಿತ್ರ. ಓಸ್ಟಾರ್ ಬ್ಯಾನರ್‌ನಲ್ಲಿ ನಾಗವೇಣಿ. ಓ. ಶೆಟ್ಟಿ ನಿರ್ಮಾಣದ, ರಾಜ ರವಿಕುಮಾರ್ ನಿರ್ದೇಶನದ ಹಾಗೂ "ಜಾಲಿ ಡೇಸ್" ಖ್ಯಾತಿಯ ನಿರಂಜನ್ ಶೆಟ್ಟಿ ಹಾಗು ಪ್ರಜ್ವಲಿ ಸುವರ್ಣ ನಾಯಕ – ನಾಯಕಿಯಾಗಿ ನಟಿಸಿರುವ ಸಂಗೀತ ಪ್ರದಾನ ಹಾಗೂ ಪ್ರೇಮ ಕಥಾನಕವನ್ನು ಹೊಂದಿರುವ '31 ಡೇಸ್' ಚಿತ್ರ ಈ ವಾರ (ಸೆಪ್ಟೆಂಬರ್ 5ರಂದು) ಬಿಡುಗಡೆಯಾಗುತ್ತಿದೆ. ಇದು ವಿ.ಮನೋಹರ್ ಸಂಗೀತ ನಿರ್ದೇಶನದ ನೂರ ಐವತ್ತನೇ ಚಿತ್ರವಾಗಿದೆ. ವಿನುತ್. ಕೆ. ಛಾಯಾಗ್ರಹಣ, ಧನು ಕುಮಾರ್, ತ್ರಿಭುವನ್ ನೃತ್ಯ ನಿರ್ದೇಶನ, ಸನತ್, ರವಿತೇ ಜ್, ನಿಶ್ಚಿತ್ ಪೂಜಾರಿರವರ ಸಂಕಲನ ಹಾಗೂ ಲಕ್ಕಿ ನಾಗೇಶ್ ಅವರ ನಿರ್ಮಾಣ ನಿರ್ವಹಣೆ ಈ ಚಿತ್ರಕ್ಕಿದೆ. '31 ಡೇಸ್' ಸಿನಿಮಾ ಸೆಪ್ಟೆಂಬರ್ 05ರಂದು ಬೆಂಗಳೂರಿನ ಕೆ.ಜಿ. ರಸ್ತೆಯ 'ಸ್ವಪ್ನ' ಚಿತ್ರಮಂದಿರ ಸೇರಿದಂತೆ ರಾಜ್ಯಾದ್ಯಂತ 100ಕ್ಕೂ ಹೆಚ್ಚು ಚಿತ್ರಮಂದಿರಗಳಲ್ಲಿ ತೆರೆ ಕಾಣಲಿದೆ.

## 'ಹಳೇ ಸನ್ಯಾಸಿ' ಹಾಡು ಬಿಡುಗಡೆ ಮಾಡಿದ ರಾಗಿಣಿ

ಸಾಮಾಜಿಕ ಮಾಧ್ಯಮದಲ್ಲಿ ಸಾಕಷ್ಟು ಸದ್ದು ಮಾಡಿರುವ ಡೈಲಾಗ್ 'Congratulations ಬ್ರದರ್'. ಈಗ ಈ ಜನಪ್ರಿಯ ಡೈಲಾಗ್ ಸಿನಿಮಾ ಶೀರ್ಷಿಕೆಯಾಗಿರುವುದು ಎಲ್ಲರಿಗೂ ತಿಳಿದ ಸಂಗತಿ. ಕಲ್ಲೂರ್ ಸಿನಿಮಾಸ್, ಪೆನ್ ಎನ್ ಪೇಪರ್ ಸ್ಟುಡಿಯೋಸ್ ಹಾಗೂ ಸ್ಕ್ರೀನ್ ಫಸ್ಟ್ ಪ್ರೊಡಕ್ಷನ್ ಲಾಂಛನದಲ್ಲಿ ಪ್ರಶಾಂತ್ ಕಲ್ಲೂರ್ ಅವರು ನಿರ್ಮಿಸಿರುವ ಈ ಚಿತ್ರವನ್ನು ಪ್ರತಾಪ್ ಗಂಧರ್ವ ನಿರ್ದೇಶಿಸಿದ್ದಾರೆ. ಹೆಸರಾಂತ ನಿರ್ದೇಶಕ ಹರಿ ಸಂತೋಷ್ ಕಥೆ ಬರೆದು ಕ್ರಿಯೇಟಿವ್ ಹೆಡ್ ಆಗಿ ಕಾರ್ಯ ನಿರ್ವಹಿಸಿರುವ ಈ ಚಿತ್ರದ ನಾಯಕನಾಗಿ ಯುವ ನಟ ರಕ್ಷಿತ್‌ನಾಗ್ ಅಭಿನಯಿಸಿದ್ದಾರೆ. ನಾಯಕಿಯರಾಗಿ ಸಂಜನಾ ದಾಸ್ ಮತ್ತು ಅನುಶಾ ನಟಿಸಿದ್ದಾರೆ. ಹಿರಿಯ ನಟ ಶಶಿಕುಮಾರ್ ಸಹ ಪ್ರಮುಖಪಾತ್ರದಲ್ಲಿದ್ದಾರೆ. ಹರೀಶ್ ರೆಡ್ಡಿ ಸಹ ನಿರ್ಮಾಪಕರಾಗಿ ಹಾಗೂ ಶ್ರೀಕಾಂತ್ ಕಶ್ಯಪ್ ಕಾರ್ಯಕಾರಿ ನಿರ್ಮಾಪಕರಾಗಿ ಕೈ ಜೋಡಿಸಿದ್ದಾರೆ.



## ಈ ವಾರ ತೆರೆಗೆ 'ಓಂ ಶಿವಂ'

ಅಲ್ವಿನ್ ನಿರ್ದೇಶನದ, ದೀಪಾ ಮೂವೀಸ್ ಲಾಂಛನದಲ್ಲಿ ಕೆ.ಎನ್.ಕೃಷ್ಣ ಅವರು ನಿರ್ಮಿಸಿರುವ ಹಾಗೂ ಭಾರ್ಗವ ಕೃಷ್ಣ ಮತ್ತು ವಿರಾನಿಕ ಶೆಟ್ಟಿ ನಾಯಕ–ನಾಯಕಿಯಾಗಿ ನಟಿಸಿರುವ 'ಓಂ ಶಿವಂ' ಚಿತ್ರ ಈ ವಾರ ರಾಜ್ಯಾದ್ಯಂತ ಬಿಡುಗಡೆಯಾ ಗುತ್ತಿದೆ. ರೊಮ್ಯಾಂಟಿಕ್ ಆಕ್ಷನ್ ಥ್ರಿಲ್ಲರ್ ಕಥಾಹಂದರ ಹೊಂದಿರುವ ಈ ಚಿತ್ರಕ್ಕೆ ಕಥೆ, ಚಿತ್ರಕಥೆ ಬರೆದಿದ್ದಾರೆ. ಸಂಭಾಷಣೆ ಮಳವಳ್ಳಿ ಸಾಯಿ ಕೃಷ್ಣ ಅವರದು. ವಿರೇಶ್ ಛಾಯಾ ಗ್ರಹಣ, ಸತೀಶ್ ಚಂದ್ರ ಸಂಕಲನ, ವಿಜಯ್ ಯಾರ್ಡ್ಲಿ ಸಂಗೀತ ನಿರ್ದೇಶನ, ನಾಗೇಶ್ ನೃತ್ಯ ನಿರ್ದೇಶನ ಹಾಗೂ ಕೌರವ ವೆಂಕಟೇಶ್, ನರಸಿಂಹ, ವೈಲೆಂಟ್ ವೇಲು ಅವರ ಸಾಹಸ ನಿರ್ದೇಶನವಿರುವ ಈ ಚಿತ್ರದ ತಾರಾಬಳಗದಲ್ಲಿ ಭಾರ್ಗವ ಕೃಷ್ಣ, ವಿರಾನಿಕ ಶೆಟ್ಟಿ, ರವಿ ಕಾಳೆ, ಕಾಕ್ರೋಜ್ ಸುಧೀ, ಯಶ್ ಶೆಟ್ಟಿ, ಬಲ ರಾಜ್ವಾಡಿ, ಲಕ್ಷ್ಮೀ ಸಿದ್ದಯ್ಯ, ಅಪೂರ್ವ, ಯಗ್ರಂ ರವಿ ಮುಂತಾದವರು ತಾರಾ ಬಳಗದಲ್ಲಿದ್ದಾರೆ.




ಕರಾವಳಿ ತರಂಗಿಣಿ



# ಸಿನಿ ತರಂಗಿಣಿ

## ಕಿಚ್ಚ ನಟನೆಯ 'ಮಾರ್ಕ್' ಟೀಸರ್ ಹವಾ..



ಅಭಿನಯ ಚಕ್ರವರ್ತಿ ಕಿಚ್ಚ ಸುದೀಪ್ ಅಭಿನಯಿಸುತ್ತಿರುವ ಸಿನಿಮಾ ಮಾರ್ಕ್. ಕಿಚ್ಚನ ಬರ್ತ್‌ಡೇಗೆ ಟೈಟಲ್ ಟೀಸರ್ ರಿಲೀಸ್ ಮಾಡಲಾಗಿತ್ತು. ಅಜಯ್ ಮಾರ್ಕಂಡೆ ಎಂಬ ಪಾತ್ರದಲ್ಲಿ ಸುದೀಪ್ ಅವರು ನಟಿಸುತ್ತಿದ್ದಾರೆ. ಮಾರ್ಕ್ ಟೈಟಲ್ ಟೀಸರ್ ಯೂಟ್ಯೂಬ್‌ನಲ್ಲಿ 5.01 ಮಿಲಿಯನ್ ವೀವ್ಸ್ ಕಂಡಿದೆ. ಇನ್ ಸ್ಟಾಗ್ರಾಂನಲ್ಲಿ 4.3 ಮಿಲಿಯನ್ ವೀಕ್ಷಣೆ ಕಂಡಿದೆ. ಯೂಟ್ಯೂಬ್ ಹಾಗೂ ಇನ್‌ಸ್ಟಾ ಒಟ್ಟಾರೆ ಸೇರಿ ಮಾರ್ಕ್ ಟೈಟಲ್ ಟೀಸರ್ 9.3 ಮಿಲಿಯನ್ ವೀವ್ಸ್ ಕಂಡಿದೆ. 'ಸತ್ಯಜ್ಯೋತಿ ಫಿಲ್ಮ್ಸ್' ಮತ್ತು 'ಕಿಚ್ಚ ಕ್ರಿಯೇಷನ್ಸ್' ಬ್ಯಾನರ್‌ಗಳು ಜೊತೆಯಾಗಿ ಈ ಸಿನಿಮಾವನ್ನು ನಿರ್ಮಿಸುತ್ತಿವೆ. ಈ ಮೊದಲು 'ಮ್ಯಾಕ್ಸ್' ಸಿನಿಮಾದ ಮೂಲಕ ನಿರ್ದೇಶಕ ವಿಜಯ್ ಕಾರ್ತಿಕೇಯ ಅವರು ಬ್ಲಾಕ್ ಬಸ್ಟರ್ ಹಿಟ್ ನೀಡಿದ್ದರು. ಅವರೇ ಈಗ 'ಮಾರ್ಕ್' ಚಿತ್ರಕ್ಕೆ ನಿರ್ದೇಶನ ಮಾಡುತ್ತಿದ್ದಾರೆ.

## 'ಗಜಾನನ ಕ್ರಿಕೆಟರ್ಸ್' 2026 ಜ.ಯಲ್ಲಿ ತೆರೆಗೆ..



ಪ್ರಜ್ವಲ್ ಫಿಲಂಸ್ ಲಾಂಛನದಲ್ಲಿ ತಯಾರಾಗುತ್ತಿರುವ ಪ್ರಜ್ವಲ್ ಶೆಟ್ಟಿ ನಿರ್ಮಾಣ ಹಾಗೂ ಕೀರ್ತನ್ ಭಂಡಾರಿ ನಿರ್ದೇಶನದ 'ಗಜಾನನ ಕ್ರಿಕೆಟರ್ಸ್ (ಜಂತೊಟ್ಟು ಸಿನ್ಸ್ 1983)' ತುಳು ಚಲನಚಿತ್ರವು 2026ರ ಜನವರಿಯಲ್ಲಿ ರಾಜ್ಯಾದ್ಯಂತ ಮತ್ತು ವಿದೇಶಗಳಲ್ಲಿ ತೆರೆಕಾಣಲು ಸಜ್ಜಾಗುತ್ತಿದೆ. ಇದು ತುಳು ಭಾಷೆಯಲ್ಲಿನ ದೊಡ್ಡ ಬಜೆಟ್ ಚಿತ್ರವಾಗಿದ್ದು, ಕ್ರಿಕೆಟ್ ಮತ್ತು ಆಟಗಾರರ ಬದುಕಿನ ಹಿನ್ನಲೆ ಆಧಾರಿತ, ಹಾಸ್ಯ, ಪ್ರೇಮ ಪೂರಿತ ಭಾವನೆಗಳು ಮತ್ತು ಸಮಾಜಮುಖಿ ಸಂದೇಶವಿರುವ ಬಿಗು ಕತೆ ಒಳಗೊಂಡಿದೆ. ಚಿತ್ರದಲ್ಲಿ ಕೀರ್ತನ್ ಭಂಡಾರಿ ಅವರು ಕಥೆ, ಚಿತ್ರಕಥೆ ಬರೆದು ಮೊದಲ ಬಾರಿಗೆ ನಿರ್ದೇಶನ ಮಾಡಿದ್ದಾರೆ. ಮಂಗಳೂರು ಹಾಗೂ ಸುತ್ತಮುತ್ತ ಪ್ರದೇಶಗಳಲ್ಲಿ ಬಹುಪಾಲು ಚಿತ್ರೀಕರಣ ನಡೆದಿದೆ. ಈ ಚಿತ್ರದಲ್ಲಿ ನಿರ್ಮಾಪಕರಾದ ಪ್ರಜ್ವಲ್ ಶೆಟ್ಟಿ ಪ್ರಮುಖ ಪಾತ್ರದಲ್ಲಿ ನಟಿಸಿದ್ದಾರೆ.

## ಸೆ. 5ಕ್ಕೆ ಅನುಷ್ಕಾ ಶೆಟ್ಟಿ ಅಭಿನಯದ "ಘಾಟಿ"

ಫಸ್ಟ್ ಫ್ರೇಮ್ ಎಂಟರ್ಟೈನ್ಮೆಂಟ್ ನಿರ್ಮಿಸಿರುವ, ಕ್ರಿಶ್ ನಿರ್ದೇಶನದ ಹಾಗೂ ಕನ್ನಡದ ನಟಿ ಅನುಷ್ಕ ಶೆಟ್ಟಿ ಪ್ರಮುಖಪಾತ್ರದಲ್ಲಿ ನಟಿಸಿರುವ "ಘಾಟಿ" ಚಿತ್ರ ಇದೇ ಸೆಪ್ಟೆಂಬರ್ 5ರಂದು ತೆಲುಗು ಹಾಗೂ ತಮಿಳು ಭಾಷೆಗಳಲ್ಲಿ ಬಿಡುಗಡೆಯಾಗುತ್ತಿದೆ. ಕರ್ನಾಟಕದಲ್ಲಿ ಈ ಚಿತ್ರದ ವಿತರಣೆಯ ಹಕ್ಕನ್ನು ನಿರ್ಮಾಪಕಿ ಪುಷ್ಪ ಅರುಣ್ ಕುಮಾರ್(ನಟ ರಾಕಿಂಗ್ ಸ್ಟಾರ್ ಯಶ್ ತಾಯಿ) ಪಡೆದುಕೊಂಡಿದ್ದಾರೆ. ಇದೇ ಮೊದಲ ಬಾರಿಗೆ ವಿತರಣಾ ವಲಯಕ್ಕೆ ಹೆಜ್ಜೆಯಿಟ್ಟಿರುವ ಪುಷ್ಪಾ ಅರುಣ್ ಕುಮಾರ್ ಅವರು ತಮ್ಮ ಪ್ರೊಡಕ್ಷನ್ಸ್ ಮೂಲಕ ಕರ್ನಾಟಕದಾದ್ಯಂತ ಈ ಚಿತ್ರವನ್ನು ಶ್ರೀಧರ್ ಕೃಪ ಕಂಬೈನ್ಸ್ ಥ್ರೂ ಬಿಡುಗಡೆ ಮಾಡುತ್ತಿದ್ದಾರೆ. ಈ ಚಿತ್ರದ ಕುರಿತು ಮಾಹಿತಿ ನೀಡಲು ಆಯೋಜಿಸಲಾಗಿದ್ದ ಪತ್ರಿಕಾಗೋಷ್ಠಿಯಲ್ಲಿ ಚಿತ್ರದ ನಿರ್ದೇಶಕ ಕ್ರಿಶ್, ನಾಯಕ ವಿಕ್ರಮ್ ಪ್ರಭು ಹಾಗೂ ವಿತರಕಿ ಪುಷ್ಪಾ ಅರುಣ್ ಕುಮಾರ್ ಭಾಗಿಯಾಗಿದ್ದರು.



## ಟಿ ಎನ್ ನಾಗೇಶ್ ನಿರ್ದೇಶನದ "ಕುಂಭ ಸಂಭವ"

"ಭೀಮ" ಚಿತ್ರದ ಗಿರಿಜಾ ಪಾತ್ರದ ಮೂಲಕ ಕನ್ನಡಿಗರ ಮನಗೆದ್ದ ಪ್ರಿಯಾ ಅವರು ಟಿ.ಎನ್. ನಾಗೇಶ್ ನಿರ್ದೇಶನದಲ್ಲಿ ಮೂಡಿಬರುತ್ತಿರುವ "ಕುಂಭ ಸಂಭವ" ಚಿತ್ರದ ಪ್ರಮುಖಪಾತ್ರದಲ್ಲಿ ನಟಿಸಿದ್ದಾರೆ. ಈ ಚಿತ್ರದಲ್ಲೂ ಪೊಲೀಸ್ ಅಧಿಕಾರಿಯಾಗಿ ಪ್ರಿಯಾ ಕಾಣಿಸಿಕೊಂಡಿದ್ದಾರೆ. ಇತ್ತೀಚಿಗೆ ಈ ಚಿತ್ರದ ಟೀಸರ್ ಬಿಡುಗಡೆ ಅದ್ದೂರಿಯಾಗಿ ನೆರವೇರಿತು. ಪರಿಪೂರ್ಣ ಸನಾತನ ಆಯುರ್ವೇದಿಕ್ ಮೆಡಿಕಲ್ ಕಾಲೇಜ್ ಮತ್ತು ಆಸ್ಪತ್ರೆಯ ಸಂಸ್ಥಾಪಕರಾದ ಗುರೂಜಿ ಡಾ. ಶ್ರೀ ಎ. ವಿ. ಶ್ರೀನಿವಾಸನ್ "ಕುಂಭ ಸಂಭವ" ಚಿತ್ರದ ಟೀಸರ್ ಬಿಡುಗಡೆ ಮಾಡಿ, ಸಮಾಜಕ್ಕೆ ಒಂದೊಳ್ಳೆ ಸಂದೇಶ ನೀಡುವ ಕಥಾಹಂದರವಿರುವ ಈ ಚಿತ್ರ ಭರ್ಜರಿ ಯಶಸ್ವಿಯಾಗಲೆಂದು ಹಾರೈಸಿದರು. ಈ ಚಿತ್ರವನ್ನು ಮಿಲ್ಕಿ ಮೂನ್ ಮೂವೀಸ್ ಲಾಂಛನದಲ್ಲಿ ನಾಗ ನಾಯ್ಕ, ನರೇಶ್ ಕುಮಾರ್, ತಾರಾ. ಆರ್, ಸುನಂದ ಹಾಗು ಪುರುಷೋತ್ತಮ ಅವರು ನಿರ್ಮಿಸುತ್ತಿದ್ದಾರೆ.









Edited, Published, Printed by Lalita Kumari (Lalithasri Preetham Rai) Shop N0: 6, Lingamma Towers. Opp. Pandeshwar police station, Pandeshwar Mangaluru 575001. Dakshina Kannada.
All Rights Reserved RNI Ref: 1327299/KARKAN26532. Printed @ N R K Media World, No-10, 'A' 1st floor, 4th cross, 4th main, Gandhinagar Bengaluru-560009. email: karavalitharangini@gmail.com PH: +91 9880109212